ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 77 RNI Number : KNKAN/25/A2770 26-03-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :77 ರಾಯಚೂರು 26-03-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಪಶ್ಚಿಮ ಏಷ್ಯಾ ಬಿಕ್ಕಟ್ಟು ಕುರಿತು ಚರ್ಚೆ: ಸರ್ವಪಕ್ಷ ಸಭೆ ಆರಂಭ; ಸರ್ಕಾರದ ವಿರುದ್ಧ ಪ್ರತಿಪಕ್ಷಗಳ ವಾಗ್ದಾಳಿ

ನವದೆಹಲಿ,ಮಾ.25- ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಕುರಿತು ಚರ್ಚಿಸಲು ಸರ್ಕಾರ ಕರೆದಿದ್ದ ಸರ್ವಪಕ್ಷ ಸಭೆ ಆರಂಭವಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗೃಹ ಸಚಿವ ಅಮಿತ್ ಶಾ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸರ್ಕಾರವನ್ನು ಪ್ರತಿನಿಧಿಸಿದ್ದಾರೆ. ಆರೋಗ್ಯ ಸಚಿವ ಜೆ ಪಿ ನಡ್ಡಾ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಕೂಡ ಸಭೆಯಲ್ಲಿ ಹಾಜರಾಗಿದ್ದಾರೆ.

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ಸಭೆಯಲ್ಲಿ ಇರಾನ್ - ಇಸ್ರೇಲ್ ಅಮೆರಿಕ ಯುದ್ಧ ಹಾಗೂ ಜಾಗತಿಕ ವಿದ್ಯಮಾನಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು. ಕಾಂಗ್ರೆಸ್‌ನ ತಾರಿಕ್ ಅನ್ವರ್ ಮತ್ತು ಮುಕುಲ್ ವಾಸ್ನಿಕ್, ಸಮಾಜವಾದಿ ಪಕ್ಷದ ಧರ್ಮೇಂದ್ರ ಯಾದವ್ ಮತ್ತು ಬಿಜು ಜನತಾದಳದ ಸಸ್ಮಿತ್ ಪಾತ್ರ ಸಭೆಯಲ್ಲಿ ಭಾಗವಹಿಸಿದ್ದಾರೆ.

ಬಿಜೆಪಿ ಮತ್ತು ಪ್ರತಿಪಕ್ಷಗಳ ನಡುವೆ ವಾಕ್ಸಮರ: ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಕುರಿತು ಸರ್ವಪಕ್ಷ ಸಭೆ ಕರೆಯುವ ಕೇಂದ್ರದ ನಿರ್ಧಾರದ ಬಗ್ಗೆ ಬಿಜೆಪಿ ಮತ್ತು ಪ್ರತಿಪಕ್ಷಗಳ ನಡುವೆ ಬುಧವಾರ ವಾಗ್ವಾದಕ್ಕೆ ಕಾರಣವಾಯಿತು. ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಇದನ್ನು ವಿಳಂಬಿತ ಕ್ರಮ ಎಂದು ಕರೆದಿದ್ದು, ಸರ್ಕಾರದ ವಿದೇಶಾಂಗ ನೀತಿಯನ್ನು ಖಂಡಿಸಿದವು. ಪ್ರಧಾನಿ ನರೇಂದ್ರ ಮೋದಿ ನಿರ್ಣಾಯಕ ಸಭೆಯಲ್ಲಿ ಭಾಗವಹಿಸದಿರುವುದನ್ನು ಪ್ರಶ್ನಿಸಿವೆ.

ಕಾಂಗ್ರೆಸ್ ಆರೋಪಕ್ಕೆ ಸರ್ಕಾರದ ತಿರುಗೇಟು: ಸೂಕ್ಷ್ಮ ವಿಷಯವನ್ನು ರಾಜಕೀಯಗೊಳಿಸುತ್ತಿದೆ ಎಂದು ಆರೋಪಿಸಿ ಬಿಜೆಪಿ ವಿರೋಧ ಪಕ್ಷಕ್ಕೆ ತಿರುಗೇಟು ನೀಡಿದೆ. ಪಶ್ಚಿಮ ಏಷ್ಯಾ ಪರಿಸ್ಥಿತಿಯ ಕುರಿತು ಸಂಸತ್ತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ ನೀಡಿದ ಬಳಿಕ ಈ ಮಹತ್ವದ ಸಭೆ ಕರೆಯಲಾಗಿದೆ.

ಲೋಕಸಭೆಯಲ್ಲಿ ಕಾಂಗ್ರೆಸ್ ಸಚೇತಕ ಮಾಣಿಕ್ಕಮ್ ಟ್ಯಾಗೋರ್ ಸರ್ಕಾರದ ವಿದೇಶಾಂಗ ನೀತಿಯ ವಿರುದ್ಧ ವಾಗ್ದಾಳಿ ನಡೆಸಿದರು. ಪಶ್ಚಿಮ ಏಷ್ಯಾ ವಿಷಯದ ಕುರಿತು ಕಾಂಗ್ರೆಸ್ ಸರ್ವಪಕ್ಷ ಸಭೆಯಲ್ಲಿ ಭಾಗವಹಿಸಲಿದೆ. ಇದನ್ನು ಮೊದಲೇ ಮಾಡಬೇಕಿತ್ತು, ಹಾಗೂ ಈ ಸಭೆಯಲ್ಲಿ ಪ್ರಧಾನಿ ಕೂಡಾ ಭಾಗವಹಿಸಬೇಕಿತ್ತು ಎಂದರು.

ಗಂಭೀರ ವಿಷಯಗಳ ಸಂದರ್ಭದಲ್ಲಿ ಇಂತಹ ಸಭೆಗಳು ನಡೆದಾಗಲೆಲ್ಲಾ, ಪ್ರಧಾನ ಮಂತ್ರಿಗಳು - ಮನಮೋಹನ್ ಸಿಂಗ್, ಅಟಲ್ ಬಿಹಾರಿ ವಾಜಪೇಯಿ ಅಥವಾ ಪಿ.ವಿ. ನರಸಿಂಹ ರಾವ್ - ಯಾವಾಗಲೂ ಭಾಗವಹಿಸುತ್ತಿದ್ದರು. ಪ್ರಧಾನಿ ಭಾಗವಹಿಸದಿರುವುದು ಇದೇ ಮೊದಲು, ಇದು ದುರದೃಷ್ಟಕರ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ವಿದೇಶಾಂಗ ನೀತಿ ತಮಾಷೆಯಾಗಿ ಮಾರ್ಪಟ್ಟಿದೆ ಎಂದು ರಾಹುಲ್ ಗಾಂಧಿ ಈಗಾಗಲೇ ಹೇಳಿದ್ದರು. ರಾಜಿ ಮಾಡಿಕೊಂಡ ಪ್ರಧಾನಿಯಿಂದಾಗಿ ದೇಶವು ಈ ಪರಿಸ್ಥಿತಿಯಲ್ಲಿದೆ ಎಂದು ಟ್ಯಾಗೋರ್ ಆರೋಪಿಸಿದರು.



ಭಾರತವು ಇರಾನ್‌ನ ಸರ್ವೋಚ್ಚ ನಾಯಕನ ಸಾವಿಗೆ ಸಂತಾಪ ಸೂಚಿಸಬೇಕಿತ್ತು ಮತ್ತು ಅವಲಂಬಿತವಾಗಿ ಕಾಣುವ ಬದಲು ವಿದೇಶಾಂಗ ನೀತಿ ನಿರ್ಧಾರಗಳಲ್ಲಿ ತನ್ನ ಸಾರ್ವಭೌಮತ್ವವನ್ನು ಪ್ರತಿಪಾದಿಸಬೇಕಿತ್ತು ಎಂದು ಕಾಂಗ್ರೆಸ್ ಸಂಸದ ಉಜ್ವಲ್ ರಮಣ್ ಸಿಂಗ್ ಹೇಳಿದರು.

ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರ ಪ್ರವಾಸ ಹಾಸ್ಟೆಲ್, ಬಸ್ ನಿಲ್ದಾಣ, ಕಾರಾಗೃಹ,ಪೊಲೀಸ್ ಠಾಣೆಗಳಿಗೆ ಭೇಟಿ

ರಾಯಚೂರು ಮಾ.25

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ ವಂಟಿಗೋಡಿ ಅವರು ಮಾರ್ಚ್ 25ರಂದು ರಾಯಚೂರು ನಗರಕ್ಕೆ ಆಗಮಿಸಿ ವಿವಿಧೆಡೆ ಮಿಂಚಿನ ಸಂಚಾರ ನಡೆಸಿದರು.

ಬೆಳಗ್ಗೆ ಬೆಂಗಳೂರಿನಿದ ಹೊರಟು ಹೈದ್ರಾಬಾದ್ ಮೂಲಕ ಮಧ್ಯಾಹ್ನ ವೇಳೆಗೆ ರಾಯಚೂರ ನಗರಕ್ಕೆ ಆಮಿಸಿದ ಆಯೋಗವು, ಮಧ್ಯಾಹ್ನ ಊಟದ ವಿರಾಮದ ಬಳಿಕ ವಿವಿಧೆಡೆ ಭೇಟಿ ಆರಂಭಿಸಿತು.

ಮೊದಲಿಗೆ ರಂಗಮದಿರ ಹತ್ತಿರದ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಅಧ್ಯಕ್ಷರು ಹಾಗೂ ಸದಸ್ಯರು, ವಸತಿ ನಿಲಯಗಳ ವಿದ್ಯಾರ್ಥಿಗಳೊಂದಿಗೆ ಮಾತನಾಡಿ ಅವರ ಅಹವಾಲು ಆಲಿಸಿದರು. ಸ್ನಾನಕ್ಕೆ ಬಿಸಿನೀರು ಸಿಗುತ್ತಾ? ಸೋಪುಕಿಟ್ ಕೊಡುತ್ತಾರಾ? ವೈದ್ಯರು ನಿಯಮಿತ ಭೇಟಿ ಕೊಡುತ್ತಾರಾ? ಸ್ಕೂಲ್ ಬಸ್ ಬರುತ್ತಾ? ಊಟ ಸರಿಯಾಗಿ ಕೊಡುತ್ತಾರಾ? ಸಿಸಿ ಟಿವಿ ಇದೆನಾ? ಎಂದು ಕೇಳಿ ಮಾಹಿತಿ ಪಡೆದುಕೊಂಡರು.

ಸದ್ಯ ಒಂದು ಕೋಣೆಯಲ್ಲಿ ಐದಾರು, ಆರೇಳು ಜನ ವಿದ್ಯಾರ್ಥಿನಿಯರಿದ್ದು, ಇಕ್ಕಟ್ಟಾಗಿವೆ. ವಿದ್ಯಾರ್ಥಿಗಳ ಸಂಖ್ಯೆಗನುಸಾರ ರೂಮಿನ ವ್ಯವಸ್ಥೆಯಾಗಬೇಕಿದೆ ಎಂದು ಹಾಸ್ಟೆಲ್ ವಾರ್ಡನ್ ಅವರು ತಿಳಿಸಿದರು. ಸಂಬಳ ಸಿಗುತ್ತಾ?



ರೇಷನ್ ಶುಚಿಯಾಗಿಡಿ. ಅಡುಗೆಗೆ ಶುದ್ಧ ನೀರು ಬಳಸಿ ಎಂದು ಅಡುಗೆದಾರರಿಗೆ ಸಲಹೆ ಮಾಡಿದರು. ಅಡುಗೆ ಸಾಮಗ್ರಿ ದಾಸ್ತಾನು ಕೊಠಡಿಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟ ಪರಿಶೀಲಿಸಿದರು. ವಿದ್ಯಾರ್ಥಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಜ್ಞಾನವೃದ್ಧಿ ಶಿಬಿರ ನಡೆಸಲು ಸಲಹೆ ಮಾಡಿದರು.

ಬಳಿಕ ಕೇಂದ್ರ ಬಸ್ ನಿಲ್ದಾಣದ ಆವರಣಕ್ಕೆ ಭೇಟಿ ನೀಡಿದರು. ಬಸ್‌ಗಳು ಸರಿಯಾಗಿ ಬರುತ್ತಾ? ಮಧ್ಯೆ ಟ್ರಿಪ್ ನಿಲ್ಲಸ್ತಾರಾ? ಎಂದು ಪ್ರಯಾಣಿಕರಿಗೆ ಕೇಳಿದರು. ರಾಯಚೂರು-ಲಿಂಗಸೂರ ಮಧ್ಯೆ ಸರಿಯಾದ ಬಸ್ಸಿ ನ ಸೌಕರ್ಯ

ಇಲ್ಲ. ಡಿಪೋಗಳಿಂದ ಬಸಗಳನ್ನು ಸರಿಯಾಗಿ ಬಿಡುತ್ತಿಲ್ಲ. ತಡೆರಹಿತ ಬಸ ಬಿಟ್ಟು ವಿದ್ಯಾರ್ಥಿಗಳ ಪಾಸಿಗೆ ಅವಕಾಶ ನೀಡುತ್ತಿಲ್ಲ. ರಾಯಚೂರ-ಮಾನವಿ ಮಧ್ಯೆ ಸಾಕಷ್ಟು ಬಸಗಳು ಪ್ರತಿನಿತ್ಯ ಓಡಾಡಿದರು ನೀರಮಾನ್ವಿಯಂತ ಕಡೆಗೆ ನಿಲ್ಲುವುದಿಲ್ಲ. ಬರೀತಡೆ ರಹಿತ ಬಸ್ ಓಡಿಸುತ್ತಾರೆ ಎಂದು ಪ್ರಯಾಣಿಕರು ದೂರಿದರು. ಜಿಲ್ಲಾಧಿಕಾರಿಗಳೊಂದಿಗೆ ನಡೆಸುವ ಸಭೆಯಲ್ಲಿ ಈ ಬಗ್ಗೆ ಚರ್ಚಿಸುವುದಾಗಿ ಅಧ್ಯಕ್ಷರು ತಿಳಿಸಿದರು. ಬಸ್ ನಿಲ್ದಾಣದಲ್ಲಿನ ಬೇಕರಿ ಮತ್ತು ಇನ್ನೀತರರ ಅಂಗಡಿಗಳಲ್ಲಿನ ಸಾಮಗ್ರಿಗಳ ಮೇಲಿನ ಅವಧಿಯನ್ನು ಪರಿಶೀಲಿಸಿದರು.

ಬಳಿಕ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿದರು. ಅಲ್ಲಿನ ಖೈದಿಗಳ ಸೆಲ್‌ಗಳಿಗೆ ಪ್ರವೇಶಿಸಿ, ಕೇಸಗಳು ಸರಿಯಾಗಿ ಆಗುತ್ತಾ? ವಕೀಲರು ಇಲ್ಲದೇ ಇರುವವರು ಇದ್ದೀರಾ? ಆರೋಗ್ಯ ತಪಾಸಣೆ ಮಾಡ್ತಾರಾ? ಹಾಸಿಗೆ ನೀಡಿದ್ದಾರಾ? ಎಂದು ಖೈದಿಗಳಿಗೆ ಕೇಳಿದರು. ಪಾತ್ರೆ ತೊಳೆದು ಬಳಸಲು ಅಡುಗೆದಾರರಿಗೆ ತಿಳಿಸಿದರು. ಮಹಿಳಾ ಖೈದಿಗಳ ಸೆಲ್ ಗೆ ಭೇಟಿ ನೀಡಿ ಅವರ

3ನೇ ಪುಟಕ್ಕೆ



ಸಿರವಾರ ಸಮುದಾಯ ಅರೋಗ್ಯ ಕೇಂದ್ರದಲ್ಲಿ ವಿಶ್ವ ಕ್ಷಯ ರೋಗ ಆಚರಣೆ

ಸಿರವಾರ,ಮಾ.25-

ಇಂದು ಸಮುದಾಯ ಅರೋಗ್ಯ ಕೇಂದ್ರ ಸಿರವಾರದಲ್ಲಿ ವಿಶ್ವ ಕ್ಷಯ ರೋಗ ದಿನಾಚರಣೆ ಆಚರಣೆ ಮಾಡಲಾಯಿತು

ಪ್ರಾರಂಭದಲ್ಲಿ ಕಾರ್ಯಕ್ರಮವನ್ನು ದೀಪ ಬೆಳಗುವ ಮೂಲಕ ಚಾಲನೆ ನೀಡಲಾಯಿತು

ನಂತರ ಪ್ರಸ್ತವಿಕವಾಗಿ ಡಾ.ಸುನಿಲ್ ಸರೋದೆ ಮಾತನಾಡಿ ಕ್ಷಯ ರೋಗ ಮುಕ್ತ ಮಾಡಬೇಕಾದರೆ ಅರೋಗ್ಯ ಇಲಾಖೆಯ ಜೊತೆ ವಿವಿಧ ಎಲ್ಲಾ ಇಲಾಖೆಯ ಸಿಬ್ಬಂದಿಗಳ ಸಹಕಾರ ಮತ್ತು ಸಮುದಾಯದ ಸಹಬಾಗಿತ್ವ ಇದ್ದಲ್ಲಿ ಕ್ಷಯ ರೋಗವನ್ನು ಬೇಗನೆ ನಿರ್ಮೂಲನೆ ಮಾಡಲು ಸಾಧ್ಯ ಹಾಗೆಯೆ ಅಂಗನವಾಡಿ ಕಾರ್ಯಕರ್ತರು ಮತ್ತು ಆಶಾ ಕಾರ್ಯಕರ್ತರು ಜೊತೆ ಸೇರಿ ನಿಮ್ಮ ವ್ಯಾಪ್ತಿಯ ಬರುವಾಗ ಗ್ರಾಮಗಳಲ್ಲಿ ಸಂಶಯಾಸ್ಪದ ರೋಗಿಗಳನ್ನು ಗುರುತಿಸಿ ತಪಾಸಣೆ ಮಾಡಿಸಲು ಸಮುದಾಯ ಅರೋಗ್ಯ ಕೇಂದ್ರಕ್ಕೆ ಬಂದು ತಪಾಸಣೆ ಮಾಡಿಸಿ ಎಂದು ಹೇಳಿದರು

ನಂತರ ಪ್ರೇಮ್ ಪ್ರಸಾದ್ ಕ್ಷಯ ರೋಗ ಮೇಲ್ವಿಚಾರಕರು ಮಾತನಾಡಿ ಕ್ಷಯ ರೋಗದ ಹಿನ್ನಲೆಯನ್ನು ನೋಡಿದಾಗ ಸುಮಾರು 5000

3ನೇ ಪುಟಕ್ಕೆ

ಭಾರತ ಸರ್ಕಾರದ ವಾರ್ತಾಶಾಖೆಯಿಂದ ವಾರ್ತಾಲಾಪ ಕಾರ್ಯಾಗಾರ

ಸ್ಥಳೀಯ ಪತ್ರಕರ್ತರ ಕಾರ್ಯಕ್ಷಮತೆಯೂ ಹೆಚ್ಚಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ರಾಯಚೂರು ಮಾ.25

ವರದಿಗಾರಿಕೆ, ಸಂಪಾದಕೀಯ ಬರೆಹ, ಪತ್ರಿಕೋದ್ಯಮದ ಪ್ರಾಥಮಿಕ ಹಂತದ ತಿಳಿವಳಿಕೆ ಸೇರಿದಂತೆ ನಾನಾ ವಿಷಯಗಳ ಬಗ್ಗೆ ತಾಲೂಕು ಮಟ್ಟದಲ್ಲಿನ ಪತ್ರಕರ್ತರಿಗೆ ತಿಳಿವಳಿಕೆಯ ಕಾರ್ಯಕ್ಷಮತೆ, ಕಾರ್ಯದಕ್ಷತೆ ಹೆಚ್ಚಿಸುವ ದಿಶೆಯಲ್ಲಿ ಕಾರ್ಯಕ್ರಮಗಳನ್ನು, ಕಾರ್ಯಗಾರಗಳನ್ನು ರೂಪಿಸಬೇಕಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹೇಳಿದರು.

ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 25ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಮಾಧ್ಯಮಗಳಿಂದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುವ ಕಾರ್ಯ ನಿರಂತರವಾಗಿ ಆಗಬೇಕು ಎಂದು ಸಲಹೆ ಮಾಡಿದ ಜಿಲ್ಲಾಧಿಕಾರಿಗಳು, ವಾರ್ತಾಲಾಪದಂತಹ ಈ ರೀತಿಯ ಕಾರ್ಯಗಾರಗಳು ನಿರಂತರ ನಡೆಯಬೇಕು ಎಂದರು.

3ನೇ ಪುಟಕ್ಕೆ

ಉತ್ತರ ಕರ್ನಾಟಕದ ಮೊಟ್ಟಮೊದಲ ಎನ್-ಜೆನ್ ಅಂಚೆ ಕಚೇರಿ ಉದ್ಘಾಟನೆ

ಅಂಚೆ ಸೇವೆ ಕ್ಯಾಂಪಸ್‌ಗೆ ಮತ್ತಷ್ಟು ಹತ್ತಿರ: ಕುಲಪತಿ ಡಾ.ಎಂ.ಹನುಮತಪ್ಪ

ರಾಯಚೂರು ಮಾ.25

ಯುವ ಸಮುದಾಯವನ್ನು ಅಂಚೆ ಸೇವೆಯತ್ತ ಸೆಳೆಯಲು ಆಧುನೀಕರಣದತ್ತ ಹೆಜ್ಜೆ ಹಾಕಿರುವ ಭಾರತೀಯ ಅಂಚೆ ಇಲಾಖೆಯ ಉತ್ತರ ಕರ್ನಾಟಕದ ಮೊಟ್ಟಮೊದಲ ಎನ್-ಜೆನ್ ಅಂಚೆ ಕಚೇರಿಗೆ ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮತಪ್ಪ ಅವರು ಮಾರ್ಚ 25ರಂದು ಚಾಲನೆ ನೀಡಿದರು.

ಈ ವೇಳೆ ಡಾ.ಎಂ.ಹನುಮತಪ್ಪ ಅವರು ಮಾತನಾಡಿ, ಇಂದಿನ ಕಾಲದಲಿ ್ಲಕಣ್ಮರೆಯಾಗುತ್ತಿರುವ ಅಂಚೆ ಸೇವೆಗಳನ್ನು ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಕ್ಯಾಂಪಸ್ ಸಮುದಾಯಕ್ಕೆ ಇನ್ನಷ್ಟು ಹತ್ತಿರ ತರಬೇಕಾಗಿದೆ. ಇ-ಮೇಲ್, ವಾಟ್ಸಾ ಆಪ್ ಹಾಗೂ ಎಸ್‌ಎಂಎಸ್‌ಗಳ ಯುಗದಲ್ಲಿಯುವ ಜನತೆಯನ್ನು ಆಕರ್ಷಿಸುವ ಉದ್ದೇಶದಿಂದಲೇ



ಭಾರತೀಯ ಅಂಚೆಯು ವಿನೂತನ ಪ್ರಯೋಗ ಆರಂಭಿಸಿದ್ದು, ಎಲ್ಲ ವಿದ್ಯಾರ್ಥಿಗಳು ಈ ಸೇವೆಗಳನ್ನು ಪಡೆಯಬೇಕು ಎಂದರು.

ಕಚೇರಿಯು ಸ್ವಯಂ ಬುಕಿಂಗ್ ಕಿಯೋಸ್ಕ್ ಮತ್ತು ಕ್ಯೂ ಆರ್ ಕೋಡ್ ಆಧಾರಿತ ತ್ವರಿತ ಪಾವತಿ ಸೇವೆಗಳನ್ನು ಒಳಗೊಂಡಿದೆ. ಉಚಿತ ವೈಫೈ ಸೌಲಭ್ಯ, ಆರಾಮದಾಯಕ ಆಸನ ವ್ಯವಸ್ಥೆ, ಲ್ಯಾಪ್‌ಟಾಪ್ ಮತ್ತು ಮೊಬೈಲ್ ಚಾರ್ಜಿಂಗ್ ಪಾಯಿಂಟ್‌ಗಳು ಹಾಗೂ ಕಾಫಿ

3ನೇ ಪುಟಕ್ಕೆ

ಪಿ.ಎಂ ವಿಶ್ವಕರ್ಮ ಯೋಜನೆ ಹೆಸರಿನಲ್ಲಿ ಅವ್ಯವಹಾರ ಆರೋಪ : ಮಹಿಳೆಯರಿಂದ ಪ್ರತಿಭಟನೆ

ರಾಯಚೂರು,ಮಾ.25-

ಕೇಂದ್ರ ಸರ್ಕಾರದ ಪಿಎಂ ವಿಶ್ವಕರ್ಮ ಯೋಜನೆ ಹೆಸರಿನಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪದ



ಹಿನ್ನೆಲೆಯಲ್ಲಿ ನೂರಾರು ಮಹಿಳೆಯರು ಜಿಲ್ಲಾ ಪಂಚಾಯತಿ ಕಚೇರಿ ಎದುರು ಬುಧವಾರ ಧಿಡೀರ್ ಪ್ರತಿಭಟನೆ ನಡೆಸಿದರು.

ಜಿಲ್ಲೆಯ ವಿವಿಧ ಗ್ರಾಮಗಳ ಮಹಿಳೆಯರಿಗೆ ಹೊಲಿಗೆ ಯಂತ್ರ ನೀಡುವುದಾಗಿ ಭರವಸೆ ನೀಡಿ ತಲಾ 400 ರೂ. ನೋಂದಣಿ ಶುಲ್ಕ ಸಂಗ್ರಹಿಸಿರುವುದಾಗಿ ಆರೋಪಿಸಲಾಗಿದೆ. ಖಾಸಗಿ ಸಂಸ್ಥೆಯಾದ ಏರೋ ಗ್ಲೋಬಲ್ ಟೆಕ್ನಾಲಜಿ ಪ್ರೈವೇಟ್ ಲಿಮಿಟೆಡ್ ಮಹಿಳೆಯರಿಗೆ ಕರೆ ಮಾಡಿ ''ನಿಮಗೆ ಹೊಲಿಗೆ ಯಂತ್ರ ಬಂದಿದೆ, ಬ್ಯಾಂಕ್ ಖಾತೆ ತೆರೆಯಿರಿ'' ಎಂದು ತಿಳಿಸಿ, ಹಲವು ತಿಂಗಳಿನಿಂದ ಕಚೇರಿಗೆ ಕರೆಸಿ ನೋಂದಣಿ ಮಾಡಿಸಿಕೊಂಡಿತ್ತು ಎನ್ನಲಾಗಿದೆ.

ಆದರೆ ಮಂಗಳವಾರ ಕಚೇರಿಗೆ ಹೋದ ಮಹಿಳೆಯರಿಗೆ ''ಯಾರೂ ನಿಮ್ಮನ್ನು ಕರೆಯಿಲ್ಲ, ಹೊರಗೆ ಹೋಗಿ'' ಎಂದು ಹೇಳಿದ ಘಟನೆ ಆಕ್ರೋಶಕ್ಕೆ ಕಾರಣವಾಯಿತು. ಇದರಿಂದ ಕೋಪಗೊಂಡ ಮಹಿಳೆಯರು ಜಿಲ್ಲಾ ಪಂಚಾಯತಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ

3ನೇ ಪುಟಕ್ಕೆ

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿಗಳಿಂದ ಕಟ್ಟುನಿಟ್ಟಿನ ನಿರ್ದೇಶನ

ಏಪ್ರೀಲ್ ಮೊದಲ ವಾರದಲ್ಲಿ ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲ ಕೆರೆಗಳ ಭರ್ತಿಗೆ ಕ್ರಮ

ರಾಯಚೂರು ಮಾ.25

ಮುಂಬರಲಿರುವ ಏಪ್ರೀಲ್ ಮೊದಲ ವಾರದಲ್ಲಿ ರಾಯಚೂರು ಜಿಲ್ಲೆಯ ಎಲ್ಲೆ ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹೇಳಿದರು.

ರಾಯಚೂರು ಜಿಲ್ಲೆಯಲ್ಲಿ ಮುಂಬರುವ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆ, ಇತ್ತೀಚೆಗೆ ಸುರಿದ ಆಲಿಕಲ್ ಮಳೆಯಿಂದಾದ ಬೆಳೆಹಾನಿ ಹಾಗೂ ಮೇವು ಲಭ್ಯತೆ ಕುರಿತು, ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಾರ್ಚ 24ರಂದು ಸಂಜೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಸಿಂಧನೂರ ತಾಲೂಕಿನಲ್ಲಿ ಅತೀ ಹೆಚ್ಚು 155 ಕೆರೆಗಳಿದ್ದು




ಈ ಎಲ್ಲ ಕೆರೆಗಳನ್ನು ಭರ್ತಿ ಮಾಡಬೇಕು. ಇನ್ನುಳಿದಂತೆ ರಾಯಚೂರು ತಾಲೂಕಿನಲ್ಲಿ 15, ಮಾನವಿ ತಾಲೂಕಿನಲ್ಲಿ 18, ಅರಕೇರಾ ತಾಲೂಕಿನಲ್ಲಿ 13, ಮಸ್ಕಿ ತಾಲೂಕಿನಲ್ಲಿ 24, ಸಿರವಾರ ತಾಲೂಕಿನಲ್ಲಿ 43 ಹಾಗೂ ಲಿಂಗಸೂರ ತಾಲೂಕಿನಲ್ಲಿ 2 ಕೆರೆಗಳಿದ್ದು ಈ ಎಲ್ಲ ಕೆರೆಗಳನ್ನು ಮುಂದಿನ ತಿಂಗಳು ಜಾಗ್ರತೆಯಿಂದ ತುಂಬಿಸಬೇಕು. ಮಳೆಗಾಲದವರೆಗೆ ಮುಂದೆ ನೀರು ಸಿಗುವುದಿಲ್ಲ ಎಂದು ತಿಳಿಸಿದರು.

ಆಯಾ ತಾಲೂಕಿನ ತಹಸೀಲ್ದಾರರು, ಕಾರ್ಯ ನಿರ್ವಾಹಕ ಅಧಿಕಾರಿಗಳು ಸಹಾಯಕ ಆಯುಕ್ತರ ಸಮ್ಮುಖದಲ್ಲಿ ಒಗ್ಗೂಡಿ ಅತ್ಯಂತ ಕಾಳಜಿಯಿಂದ ಕೆರೆಗಳನ್ನು ತುಂಬಿಸಬೇಕು. ಈಗೊಂದು ವೇಳೆ ಕೆರೆ ತುಂಬಿಸದಿದ್ದಲ್ಲಿ ಜನತೆಗೆ ತೊಂದರೆಯಾಗಲಿದೆ. ಮುಂದಿನ ಜುಲೈವರೆಗೆ ಮತ್ತೆ ನೀರು ಸಿಗುವುದಿಲ್ಲ. ಏಪ್ರೀಲ್, ಮೇ ಮತ್ತು ಜೂನ್ ಮಾಹೆಯಲ್ಲಿ ಯಾವುದೇ ರೀತಿಯಲ್ಲಿ ಜನತೆಗೆ ಕುಡಿಯುವ ನೀರಿಗೆ ತೊಂದರೆಯಾಗದ ಹಾಗೆ ವ್ಯವಸ್ಥೆಯಾಗಬೇಕು.

ಬರುವ ಏಪ್ರೀಲ್ ಮೊದಲನೇ ವಾರದಲ್ಲಿ ನೀರು ಹರಿಸಲಾಗುವುದು. ಈ ವೇಳೆ ಕೆರೆಗೆ ನೀರು ತುಂಬಿಸದೇ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿ ಯಾವುದಾದರು ಗ್ರಾಮಸ್ಥರಿಗೆ ತೊಂದರೆಯಾದಲ್ಲಿ ಇದನ್ನು ಗಂಭೀರವಾಗಿ

3ನೇ ಪುಟಕ್ಕೆ

ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ಪೂಜನೀಯ ಸ್ಥಾನ-ಮುಂಡರಗಿ ನಾಗರಾಜ್



ಬಳ್ಳಾರಿ,ಮಾ.25-

ಭಾರತೀಯ ಸಂಸ್ಕೃತಿಯಲ್ಲಿ ಹಿಂದಿನಿಂದಲೂ ಮಹಿಳೆಯರಿಗೆ ಪೂಜನೀಯ ಸ್ಥಾನವಿದೆ ಎಂದು ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ನಗರದ ವಾಲ್ಮೀಕಿ ಭವನದಲ್ಲಿ ಮಂಗಳವಾರ ಏರ್ಪಡಿಸಿದ್ದ ಅಂತರಾಷ್ಟ್ರಿಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಪೋರ್ಚುಗೀಸರ ವಿರುದ್ಧ ಹೋರಾಡಿದ್ದ ತುಳುನಾಡಿನ ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಝಾನ್ಸಿ ರಾಣಿ ಲಕ್ಷ್ಮಿಬಾಯಿ ಅಂತಹ ವೀರ ಮಹಿಳೆಯರ ಧೈರ್ಯದ ಕಥೆಗಳನ್ನು ಸ್ಮರಿಸಬೇಕು. ಮಹಿಳೆಯರು ಮತ್ತು ದಲಿತರಿಗೆ ಶಿಕ್ಷಣ ನಿರಾಕರಿಸಲ್ಪಟ್ಟ ಕಾಲದಲ್ಲಿ, ಪುಣೆಯಲ್ಲಿ ಮೊದಲ ಬಾರಿಗೆ ಹೆಣ್ಣು ಮಕ್ಕಳಿಗಾಗಿ ಶಾಲೆ ತೆರೆದ ಸಾವಿತ್ರಿಬಾಯಿ ಫುಲೆ ಅವರ ಕೊಡುಗೆಯನ್ನು ಇಂದು ನಾವೆಲ್ಲರೂ ಗೌರವಿಸಬೇಕು ಎಂದರು.

ಡಾ.ಬಿ.ಆರ್. ಅಂಬೇಡ್ಕರ್ ಅವರು ಮಹಿಳೆಯರಿಗೆ ಸಮಾನ ಹಕ್ಕುಗಳನ್ನು ಒದಗಿಸಲು ಸಾಕಷ್ಟು ಶ್ರಮ ಪಟ್ಟಿದ್ದಾರೆ. ಮಹಿಳೆಯರಿಗೆ ಆಸ್ತಿಯಲ್ಲಿ ಸಮಾನ ಹಕ್ಕು ಮತ್ತು ಸ್ವಾತಂತ್ರ್ಯ ನೀಡಲು ಅಂಬೇಡ್ಕರ್ ಅವರು ಮಂಡಿಸಿದ ಹಿಂದೂ ಕೋಡ್ ಬಿಲ್ ಮಸೂದೆ ತಿರಸ್ಕಾರಗೊಂಡಾಗ ತಮ್ಮ ಮಂತ್ರಿ ಪದವಿಗೆ ರಾಜೀನಾಮೆ ನೀಡಿದ್ದರು ಎಂದು ಸ್ಮರಿಸಿದರು.

1910 ರಲ್ಲಿ ಡೆನ್ಮಾರ್ಕ್ ನಲ್ಲಿ ಕ್ಲಾರಾ ಜೆಟ್ಕಿನ್ ಅವರು ಮಹಿಳಾ ಹಕ್ಕುಗಳಿಗಾಗಿ ಆರಂಭಿಸಿದ ಹೋರಾಟದ ಫಲವಾಗಿ ಅಂತರರಾಷ್ಟ್ರಿಯ ಮಹಿಳಾ ದಿನಾಚರಣೆ ಅಸ್ತಿತ್ವಕ್ಕೆ ಬಂತು. 1975 ರಲ್ಲಿ ಭಾರತದಲ್ಲಿ ಆಚರಿಸಲಾಯಿತು ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳು ಮಹಿಳೆಯರ ಸಬಲೀಕರಣಕ್ಕೆ ಪೂರಕವಾಗಿದ್ದು, ಈ ಕಾರ್ಯಕ್ರಮಗಳಿಗೆ ಹಲವು ಗಣ್ಯರಿಂದ ಶ್ಲಾಘನೆಗಳ ಮಹಾಪೂರವೇ ಹರಿದು ಬಂದಿವೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ಈ ವರ್ಷದ ಮಹಿಳಾ ದಿನಾಚರಣೆಯನ್ನು ಗಿವ್ ಟು ಗೇನ್' (ಪಡೆಯುವುದಕ್ಕಾಗಿ ಕೊಡಿ) ಎಂಬ ವಿಶೇಷ ಥೀಮ್‌ನೊಂದಿಗೆ ಆಚರಿಸಲಾಗುತ್ತಿದೆ. ಮಹಿಳೆಯರಿಗೆ ಅವಕಾಶ ಮತ್ತು ಸಮಯ ನೀಡಿದರೆ, ಅದು ಸಮೃದ್ಧ ಸಮಾಜವಾಗಿ ನಮಗೆ ಮರಳಿ ಸಿಗುತ್ತದೆ ಎಂಬುದು ಇದರ ಆಶಯ ಎಂದು ತಿಳಿಸಿಕೊಟ್ಟರು.

ಸರ್ಕಾರದ ಸೌಲಭ್ಯಗಳು ಫಲಾನುಭವಿಗಳಿಗೆ ತಲುಪುವಲ್ಲಿ ವಿಳಂಬವಾಗುತ್ತಿದೆ. ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ಅರ್ಜಿಗಾಗಿ ಕಾಯುವ ಬದಲು ಅಧಿಕಾರಿಗಳೆ ಚುರುಕಾಗಿ ಕಾರ್ಯನಿರ್ವಹಿಸಿ ಮಹಿಳೆಯರು ಮತ್ತು ವಿಶೇಷ ಚೇತನರಿದ್ದ ಸ್ಥಳಕ್ಕೆ ಹೋಗಿ ಸೌಲಭ್ಯಗಳನ್ನು ತಲುಪಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಮಹಿಳೆಯರು ಕೇವಲ ಫಲಾನುಭವಿಗಳಾಗದೆ, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ನೇತೃತ್ವದ ಸ್ಥಾನಗಳನ್ನು ಅಲಂಕರಿಸುವ ಮೂಲಕ ಸಮಾಜವನ್ನು ಮುನ್ನಡೆಸುವಂತವರಾಗಬೇಕು ಎಂದು ಹೇಳಿದರು.

ಒಬ್ಬ ಹುಡುಗನಿಗೆ ಶಿಕ್ಷಣ ನೀಡಿದರೆ ಅದು ಅವನಿಗೆ ಮಾತ್ರ ಸೀಮಿತ, ಆದರೆ ಒಬ್ಬ ಹೆಣ್ಣು ಮಗುವಿಗೆ ಶಿಕ್ಷಣ ನೀಡಿದರೆ ಅದು ಇಡೀ ಕುಟುಂಬ ಮತ್ತು ಸಮಾಜಕ್ಕೆ ನೀಡಿದಂತೆ ಎಂಬ ಪ್ರಸಿದ್ಧ ಮಾತಿನಂತೆ, ಪೋಷಕರು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಶಿಕ್ಷಣದ ಕೊರತೆ ಮತ್ತು ಶಾಲೆ ಬಿಡುವ ಪ್ರಮಾಣ ಹೆಚ್ಚಾದಾಗ ಬಾಲ್ಯ ವಿವಾಹದಂತಹ ಪ್ರಕರಣಗಳು ಹೆಚ್ಚುತ್ತವೆ. ಇದನ್ನು ತಡೆಯಲು ಹೆಣ್ಣು ಮಕ್ಕಳಿಗೆ ಕನಿಷ್ಠ ಪದವಿ ಅಥವಾ ಅವರ ಆಸಕ್ತಿಗೆ ಅನುಗುಣವಾಗಿ ಉನ್ನತ ಶಿಕ್ಷಣ ನೀಡಲು ಪೋಷಕರು ಪ್ರೋತ್ಸಾಹಿಸಬೇಕು. ಮಹಿಳೆಯರಿಗೆ ಸಮಾನ ಅವಕಾಶ ಮತ್ತು ಸುರಕ್ಷಿತ ವಾತಾವರಣ ಕಲ್ಪಿಸಿದರೆ ಮಾತ್ರ ದೇಶವು ಸುಸ್ಥಿರ ಅಭಿವೃದ್ಧಿ ಸಾಧಿಸಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಮಹಿಳೆಯರಲ್ಲಿರುವ ಸೌಮ್ಯತೆ, ಧೈರ್ಯ, ಪ್ರೀತಿ ಮತ್ತು ವಿಶ್ವಾಸ ಇಡೀ ಜಗತ್ತನ್ನೇ ಗೆಲ್ಲುವ ಶಕ್ತಿ ಹೊಂದಿದೆ. ಇಂದು ಪುರುಷರು ಪಡೆಯುತ್ತಿರುವ ಸ್ಥಾನಮಾನ, ಗೌರವ ಮತ್ತು ಅಧಿಕಾರದ ಹಿಂದೆ ತಾಯಿ ಮತ್ತು ಪತ್ನಿಯ ಸಹಕಾರ ಅಡಗಿದೆ. ಒಂದು ರಾಜ್ಯ, ಗ್ರಾಮ, ಶಾಲೆ ಅಥವಾ ದೇಶದಲ್ಲಿ ನಿಜವಾದ ಬದಲಾವಣೆ ಆಗಬೇಕಾದರೆ ಅದು ಮಹಿಳೆಯರಿಂದ ಮಾತ್ರ ಸಾಧ್ಯ. ಅವರು ಮನಸ್ಸು ಮಾಡಿದರೆ ಯಾವುದೇ ಬದಲಾವಣೆ ಅಸಾಧ್ಯವಲ್ಲ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ನಮ್ಮನ್ನು ಸಾಕಿ ಬೆಳೆಸಿದ ತಾಯಂದಿರ ಋಣ ತೀರಿಸುವುದು ಅಸಾಧ್ಯ. ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಕೇವಲ ಭರವಸೆಗಳಾಗಿ ಉಳಿಯದೆ, ಇಂದು ಪ್ರತಿಯೊಬ್ಬ ಮಹಿಳೆಯ ಬದುಕಿನಲ್ಲಿ ಹೊಸ ಸಂಚಲನ ಮೂಡಿಸಿವೆ. ಅವರ ಆರ್ಥಿಕ ಸ್ವಾತಂತ್ರ್ಯಕ್ಕಾಗಿ ಸಿದ್ದರಾಮಯ್ಯನವರ ಸರ್ಕಾರ ಈ ಯೋಜನೆಗಳನ್ನು ರೂಪಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕಿಯರನ್ನು ಗೌರವಿಸಿ ಸನ್ಮಾನಿಸಲಾಯಿತು. ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು.

ಈ ಸಂದರ್ಭದಲ್ಲಿ ಅಪರ ಜಿಲ್ಲಾ ಧಿಕಾರಿ ಮಹಮ್ಮದ್ ಝುಬೇರ್‌ಎನ್., ಜಿಪಂ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ.ಎಂ., ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಆಶಾಲತಾ ಸೋಮಪ್ಪ, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ ಗೌಡ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ತ್ರಿವೇಣಿ ಪತ್ತಾರ್, ಕುರುಗೋಡು ತಾಪಂ ಇಓ ಕೆ.ವಿ ನಿರ್ಮಲಾ, ಜಿಪಂ ಲೆಕ್ಕಾಧಿಕಾರಿ ನಾಗಲಕ್ಷ್ಮಿ, ಡಿವೈಎಸ್ಪಿ ಗೋವಿಂ ದರಾಜ್, ಹಿರಿಯ ಸಾಹಿತಿ ಎನ್.ಡಿ. ವೆಂಕಮ್ಮ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು-ಸಹಾಯಕಿಯರು, ಸ್ವ- ಸಹಾಯ ಸಂಘದ ಮಹಿಳೆಯರು ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.



ಯುವಕರು ಕೌಶಲ್ಯಕ್ಕೆ ಒತ್ತು ನೀಡಿ: ಪಿ.ಎಸ್.ಹಟ್ಟಪ್ಪ

ಬಳ್ಳಾರಿ,ಮಾ.25-

ಇಂದಿನ ಯುವಕರು ಕೌಶಲ್ಯಕ್ಕೆ ಹೆಚ್ಚು ಒತ್ತು ನೀಡಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪಿ.ಎಸ್ ಹಟ್ಟಪ್ಪ ಅವರು ಹೇಳಿದರು.

ಕೇಂದ್ರ ಸರ್ಕಾರದ ಮೇರಾ ಯುವ ಭಾರತ ಬಳ್ಳಾರಿ ಹಾಗೂ ಬಿಡಿಎಸ್ ಸಹಯೋಗದಲ್ಲಿ ಬಿಡಿಎಸ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರ ಜಿಲ್ಲಾ ಯುವ ವಿನಿಮಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಯುವ ಪೀಳಿಗೆ ಕೌಶಲ್ಯ ಚಟುವಟಿಕೆಗಳನ್ನು ಅಳವಡಿಸಿಕೊಂಡಾಗ ಮಾತ್ರ ದೇಶಕ್ಕೆ ಅಮೂಲ್ಯ ವಾದ ತಮ್ಮ ಕೊಡುಗೆ ನೀಡಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಮೇರಾ ಯುವ ಭಾರತ ಕೇಂದ್ರದ ಯುವ ಅಧಿಕಾರಿ ಬುಕ್ಕ ಸಂಜೀವ್ ಅವರು ಮಾತನಾಡಿ, ಭಾರತದಲ್ಲಿ ಪ್ರತಿ 50 ಕಿಲೋ ಮೀಟರ್ ಗೆ ಭಾಷೆ, ಸಂಸ್ಕೃತಿ, ಆಹಾರ ಪದ್ಧತಿ ಬದಲಾವಣೆ ಕಾಣಬಹುದು. ಈಗಿನ ಯುವಕರಿಗೆ ಇವುಗಳ ಪರಿಚಯ ಉತ್ತಮ ಮನೋ ಭಾವನೆ ಬೆಳೆಸಿಕೊಳ್ಳಲು ಸಹಕಾರಿ ಎಂದು ತಿಳಿಸಿದರು.

ಸಿಇಡಿಓಕೆ ವಿನೋದ್ ಕುಮಾರ್ ಅವರು ಮಾತನಾಡಿ ಬಳ್ಳಾರಿ ಜಿಲ್ಲೆಯಲ್ಲಿರುವ ವಿಶೇಷತೆಗಳ ಕುರಿತು ವಿವರಣೆ ನೀಡಿದರು.

ಎಸ್‌ಜಿಆರ್‌ಸಿಎಂ ಕಾಲೇಜಿನ ಪ್ರಾಂಶುಪಾಲ ಡಿ.ರಾಮಕೃಷ್ಣ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಬಳ್ಳಾರಿಯ ಸಂಸ್ಕೃತಿ, ಬಿಸಿಲಿನ ಗಮ್ಮತ್ತು ಹಾಗೂ ಇಲ್ಲಿನ ಆಹಾರ ಪದ್ಧತಿ ಬಗ್ಗೆ ತಿಳಿಸಿಕೊಟ್ಟರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಮರಿ ಗಾದಿಲಿಂಗಪ್ಪ ಅವರು ಮಾತನಾಡಿ, ಯುವ ಜನತೆ ದೇಶದ ಶಕ್ತಿ ಎಂದು ಹೇಳುವ ಮೂಲಕ ಅಂತರ ಜಿಲ್ಲಾ ಯುವ ವಿನಿಮಯದ ಮಹತ್ವದ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಟಿ.ಎನ್ ಮಾರುತಿ ಪ್ರಸನ್ನ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ವಿವಿಧೆಡೆ ದಾಳಿ: ಓರ್ವ ಬಾಲಕಾರ್ಮಿಕನ ರಕ್ಷಣೆ



ಬಳ್ಳಾರಿ,ಮಾ.25-

ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನೆ ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಮಂಗಳವಾರ ನಗರದ ವಿವಿಧೆಡೆ ದಾಳಿ ನಡೆಸಿ ಓರ್ವ ಬಾಲ ಕಾರ್ಮಿಕನನ್ನು ರಕ್ಷಿಸಲಾಗಿದೆ.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್-ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಉಪತಹಶೀಲ್ದಾರ್ ಮಂಜುನಾಥ ಅವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ.

ನಗರದ ಬೆಂಗಳೂರು ರಸ್ತೆ, ಬಾಪೂಜಿ ನಗರ, ಎ.ಪಿ.ಎಂ.ಸಿ ಹತ್ತಿರದ ವಿವಿಧ ಸ್ಥಳಗಳಲ್ಲಿರುವ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ, ಜೀನ್ಸ್ ಹೊಲಿಗೆ ಘಟಕಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ಮೂಲಕ ಭೇಟಿ ನೀಡಿದ ಸಂದರ್ಭದಲ್ಲಿ ಮಕ್ಕಳು ಕೆಲಸ ಮಾಡುತ್ತಿರುವುದನ್ನು ಗಮನಿಸಲಾಯಿತು. ತಕ್ಷಣ ಅಲ್ಲಿ ಕೆಲಸ ನಿರ್ವಹಿಸುತ್ತಿದ್ದ 01 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ವಶಕ್ಕೆ ಪಡೆದು ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿಯೇ ಪಡೆದುಕೊಂಡು ಪೋಷಕರ ವಶಕ್ಕೆ ಒಪ್ಪಿಸಲಾಯಿತು.

ಇದೇ ವೇಳೆ ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಬಳ್ಳಾರಿಯ 1ನೇ ವೃತ್ತದ ಕಾರ್ಮಿಕ ನಿರೀಕ್ಷಕ ರಮೇಶ್, 2ನೇ ವೃತ್ತದ ಕಾರ್ಮಿಕ ನಿರೀಕ್ಷಕ ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಆರೋಗ್ಯ ಇಲಾಖೆಯ ಮುಸ್ತಾಕ್ ಅಹಮದ್, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಹೊನ್ನೂರಪ್ಪ, ಮಕ್ಕಳ ಸಹಾಯವಾಣಿ ಸಿಬ್ಬಂದಿ ಕಾರ್ತಿಕ್ ಮತ್ತು ರೀಚ್ ಸಂಸ್ಥೆಯ ಸಂಯೋಜಕಿ ಲಕ್ಷ್ಮಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಜಲ ಸಂರಕ್ಷಣೆ ಇಂದಿನ ಅನಿವಾರ್ಯತೆ-ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್

ಬಳ್ಳಾರಿ,ಮಾ.25-

ಪ್ರಸ್ತುತದಲ್ಲಿ ಜಲ ಸಂರಕ್ಷಣೆಯು ತುಂಬಾ ಅನಿವಾರ್ಯವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಆಯೋಜಿಸಿದ್ದ'ವಿಶ್ವ ಜಲ ದಿನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ನೀರನ್ನು ಮಿತವಾಗಿ ಬಳಸಿ, ಮುಂದಿನ ಪೀಳಿಗೆಗಾಗಿ ಅದನ್ನು ಸಂರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ನಿಂಗಪ್ಪ ಹೊಸಮನೆ ಅವರು ಮಾತನಾಡಿ, ಜಲ ಸಂರಕ್ಷಣೆಯ ಕಾನೂನಾತ್ಮಕ ಅರಿವು ಹಾಗೂ ನೀರಿನ ಮಹತ್ವ ಹೊಂದುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ನೀರು ಮತ್ತು ಲಿಂಗ ಸಮಾನತೆ ಎಲ್ಲಿ ನೀರು ಹರಿಯುತ್ತದೆಯೋ, ಅಲ್ಲಿ ಸಮಾನತೆ ಬೆಳೆಯುತ್ತದೆ ಎಂಬುದು 2026 ರ ಘೋಷವಾಕ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಪ್ರಹ್ಲಾದ ಜೋಶಿ, ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಮುಖ್ಯ ಲೆಕ್ಕಾಧಿಕಾರಿ ವಿನೋದ್ ಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಾರ್ಯನಿರ್ವಾಹಕ ಅಭಿಯಂತರ ಇಂಧುದರ ಸೇರಿದಂತೆ ವಿವಿಧ ತಾಲ್ಲೂಕುಗಳ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಅಭಿಯಂತರರು, ಕಿರಿಯ ಅಭಿಯಂತರರು ಹಾಗೂ ಜಿಪಂ ಡಿಪಿಎಂ, ಎಐಎಸ್ ವಿಭಾಗದ ಸಿಬ್ಬಂದಿ, ಪ್ರಯೋಗಾಲಯದ ಸಿಬ್ಬಂದಿ, ಡಿಟಿಎಸ್‌ಯು ಮತ್ತು ಸ್ವಚ್ಛ ಭಾರತ್ ಮಿಷನ್ ಸಿಬ್ಬಂದಿ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿಶ್ವಕ್ಷಯರೋಗ ದಿನಾಚರಣೆಯ ಜಾಗೃತಿ ಜಾಥಾ ಮೂಲಕ ವಿಶೇಷ ಅರಿವು

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸಾಧಕರಿಗೆ ಪಶಸ್ತಿ ಪ್ರದಾನ: ಗಂಗಾವತಿ ಪ್ರಾಣೇಶ ಭಾಗಿ



ಕೊಪ್ಪಳ ಮಾ.25-

ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಮಂಗಳವಾರದಂದು ಜಾಗೃತಿ ಜಾಥಾ ಮೂಲಕ ವಿಶೇಷ ಅರಿವು ಮೂಡಿಸಲಾಯಿತು ಮತ್ತು ವೇದಿಕೆ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಸಾಧನೆಗೈದ ಸಾಧಕರಿಗೆ ಪಶಸ್ತಿ ಪ್ರಧಾನ ಮಾಡಲಾಯಿತು.

ನಗರದ ಹಳೇ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಏರ್ಪಡಿಸಲಾದ ಜಿಲ್ಲಾಮಟ್ಟದ ವಿಶ್ವ ಕ್ಷಯರೋಗ ದಿನಾಚರಣೆಯ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಎ.ಶಶಿಧರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಥವು ಹಳೇ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂಭಗೊಂಡು, ನಗರದ ಕೇಂದ್ರೀಯ ಬಸ್ ನಿಲ್ದಾಣ, ಡಾ. ಸಿಂಪಿ ಲಿಂಗಣ್ಣ ರಸ್ತೆ, ದಿವಟರ್ ವೃತ್ತ, ಜವಾಹಾರ ರಸ್ತೆ ಮಾರ್ಗವಾಗಿ ಸಾಹಿತ್ಯ ಭವನದ ವರೆಗೆ ನಡೆಯಿತು.

ವೇದಿಕೆ ಕಾರ್ಯಕ್ರಮ: ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ವಿವಿಧ ಇಲಾಖೆಗಳು ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಹಾಸ್ಯ ಕಲಾವಿದರೂ ಹಾಗೂ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದ ರಾಯಭಾರಿಗಳಾದ ಗಂಗಾವತಿ ಪ್ರಾಣೇಶ ಅವರು ಭಾಗವಹಿಸಿ ಮಾತನಾಡಿ, ಹಿಂದಿನ ಕಾಲದಲ್ಲಿ ಕ್ಷಯರೋಗವು ಒಂದು ಮಾರಣಾಂತಿಕ ರೋಗವಾಗಿದ್ದು,ಅನೇಕ ಜನರು ಕ್ಷಯರೋಗದಿಂದ ಸಾವನ್ನಪ್ಪುತ್ತಿದ್ದರು. ಆದರೆ, ಈಗ ಕ್ಷಯರೋಗದ ಅರಿವು ಮತ್ತು ಜಾಗೃತಿ ಜನರಲ್ಲಿ ಹೆಚ್ಚಾಗಿ ಮೂಡುತ್ತಿದ್ದು, ಕ್ಷಯರೋಗ ಚಿಕಿತ್ಸೆ ಯನ್ನು ಪಡೆದಲ್ಲಿ ಸಂಪೂರ್ಣ ಗುಣಮುಖವಾಗಬಹುದಾಗಿದೆ ಎಂದರು.

ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿಗಳಾದ ಡಾ.ಶಶಿಧರ ಎ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, 2026ರ ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮವನ್ನು ''ಹೌದು, ಭಾರತದ ನೇತೃತ್ವದಲ್ಲಿ, ಜನರ ಶಕ್ತಿಯೊಂದಿಗೆ ನಾವು ಕ್ಷಯರೋಗವನ್ನು ನಿರ್ಮೂಲನೆ ಮಾಡಬಹುದು'' ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. 2025ನೇ ಸಾಲಿನಲ್ಲಿ ಕ್ಷಯರೋಗಿಗಳ ಪತ್ತೆ ವಿಶೇಷವಾಗಿ ಸರ್ಕಾರಿ ಮತ್ತು ಖಾಸಗಿ ವಲಯದಿಂದ ಕಫದಲ್ಲಿ ದೃಢಪಟ್ಟ ಕ್ಷಯರೋಗಿಗಳನ್ನು ಪತ್ತೆ ಹಚ್ಚುವಲ್ಲಿ ವಿಶೇಷ ಸಾಧನೆ ಮಾಡಿದ್ದು, ಜಿಲ್ಲೆಯಲ್ಲಿರುವ 8 ತ್ವರಿತ ಮತ್ತು ಪ್ರಾಥಮಿಕ ಹಂತದಲ್ಲಿ ಕ್ಷಯವನ್ನು ಪತ್ತೆ ಹಚ್ಚುವ ಸಿಬಿನಾಟ್ ಯಂತ್ರಗಳು ಹಾಗೂ 16 ಟ್ರೂನಾಟ್ ಯಂತ್ರಗಳ ಕಫ ಪರೀಕ್ಷೆಯ ಜೊತೆಗೆ ಕ್ಷ-ಕಿರಣ ಮುಖಾಂತರ ಪತ್ತೆ ಹಚ್ಚಿದ್ದರಿಂದ 2025ನೇ ಸಾಲಿನಲ್ಲಿ ಉತ್ತಮ ಸಾಧನೆ ಮಾಡಲು ಅನುಕೂಲವಾಗಿದೆ. ಇದಕ್ಕೆ ಮುಖ್ಯ ಕಾರಣ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕ್ಷಯರೋಗದ ಹರಡುವಿಕೆಯನ್ನು ತಡೆಗಟ್ಟಲು ಹಮ್ಮಿಕೊಂಡಿರುವ ಅನೇಕ ಯೋಜನೆಗಳಾದ ವಿಭಿನ್ನ ಆರೈಕೆ ಮಾದರಿ, ಆಸ್ಪತ್ರೆಗಳಲ್ಲಿ ಒಳರೋಗಿಗಳ ತಪಾಸಣೆ ಕಾರ್ಯಕ್ರಮ, ಟಿ.ಬಿ. ಗುರುವಾರ, ನಿಕ್ಷಯ್ ದಿವಸ, ಕ್ಷಯ ಮುಕ್ತ ಶಾಲೆ ಮತ್ತು ಕ್ಷಯಮುಕ್ತ ಕಾರ್ಯಸ್ಥಳ ಆಗಿವೆ ಎಂದರು.

ಇದಲ್ಲದೇ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು, ತಲಾ ಇಬ್ಬರು ಕ್ಷಯರೋಗಿಗಳನ್ನು ದತ್ತು ಪಡೆದು ಚಿಕಿತ್ಸೆ ಯನ್ನು ಪೂರೈಸುವವರೆಗೂ ಆರು ತಿಂಗಳ ಕಾಲ 1000 ಮುಖಬೆಲೆಯ ಪೌಷ್ಟಿಕ ಆಹಾರದ ಕಿಟ್‌ಗಳನ್ನು ನೀಡುವ ಮೂಲಕ ಎಲ್ಲರಿಗೂ ಮಾದರಿಯಾಗುವ ಮೂಲಕ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮಕ್ಕೆ ಸಹಕಾರ ನೀಡಿದ್ದಾರೆ. ಇದಕ್ಕಾಗಿ ಈ ವೇದಿಕೆಯ ಮುಖಾಂತರ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು.

ಮುಕುಂದ ಸುಮಿ ಸ್ಪೇಷಲ್ ಸ್ಟೀಲ್ಸ್ ಲಿಮಿಟೆಡ್, ಹೊಸ ಕನಕಾಪುರ ಕಾರ್ಖಾನೆಯವರು 10,00,000 ರೂಪಾಯಿಗಳ 1000 ಪೌಷ್ಟಿಕ ಆಹಾರದ ಕಿಟ್‌ಗಳನ್ನು ಕ್ಷಯರೋಗಿಗಳಿಗೆ ನೀಡುವ ಮೂಲಕ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮಕ್ಕೆ ಮಹತ್ವದ ಕೊಡುಗೆಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಟಿ.ಲಿಂಗರಾಜು ಅವರು ಮಾತನಾಡಿ, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಒತ್ತಡದಿಂದ ಕರ್ತವ್ಯ ನಿರ್ವಹಿಸುತ್ತಿದ್ದರೂ ತಮ್ಮ ಹವ್ಯಾಸಗಳಿಗೆ ಕನಿಷ್ಟ ಸಮಯವನ್ನು ನೀಡುವ ಮೂಲಕ ಒತ್ತಡವನ್ನು ಕಡಿಮೆ ಮಾಡಬಹುದಾಗಿದೆ. ಕಲ್ಯಾಣ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ 4 ಸಿಬಿನಾಟ್ ಯಂತ್ರಗಳನ್ನು ಜಿಲ್ಲಾ ಆಡಳಿತ ಕೊಡಿಸಿರುವುದರಿಂದ ಕ್ಷಯರೋಗ ಪತ್ತೆಯ ಪ್ರಮಾಣ ಹೆಚ್ಚಾಗಿರುವುದರಿಂದ ಈ ಹಿಂದೆ ಜಿಲ್ಲಾಧಿಕಾರಿಗಳಾಗಿದ್ದ ನಳಿನ್ ಅತುಲ್ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿದ್ದ ರಾಹುಲ್ ರತ್ನಂ ಪಾಂಡೆಯ ರವರಿಗೆ ಈ ವೇದಿಕೆಯ ಮುಖಾಂತರ ಕೃತಜ್ಞತೆಯನ್ನು ಸಲ್ಲಿಸಿದರು.

ಬಿಸಿಲಿನ ಪ್ರಖರತೆ ಹಾಗೂ ತೀವ್ರತೆಯಿಂದ ಪಾರಾಗಲು ಆರೋಗ್ಯ ಇಲಾಖೆಯಿಂದ ಸಲಹೆಗಳು

ಕೊಪ್ಪಳ ಮಾ.25-

ಜಿಲ್ಲೆಯಾದ್ಯಂತ ಪ್ರಸ್ತುತ ತಿಂಗಳಿನಿಂದ ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಕಂಡುಬಂದ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ತಮ್ಮ ಆರೋಗ್ಯದ ಬಗ್ಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಾರ್ವಜನಿಕರಿಗೆ ಸಲಹೆಗಳನ್ನು ನೀಡಿದೆ.

ಬೇಸಿಗೆ ಸಮಯದಲ್ಲಿ ಹೆಚ್ಚು ನೀರನ್ನು ಕುಡಿಯಬೇಕು. ಮಜ್ಜಿಗೆ ಅಥವಾ ಎಳನೀರು, ಹಣ್ಣಿನ ರಸವನ್ನು ಹೆಚ್ಚಾಗಿ ಸೇವಿಸಬೇಕು. ನೀರಿನ ಅಂಶ ಹೆಚ್ಚಾಗಿರುವ ತರಕಾರಿಗಳು, ಹಣ್ಣುಗಳನ್ನು ಸೇವಿಸುವುದು ಉತ್ತಮ. ಸಡಿಲವಾದ ತೆಳು ಬಣ್ಣದ ಹತ್ತಿಯ ಬಟ್ಟೆಯನ್ನು ಧರಿಸಬೇಕು ಹಾಗೂ ಗಾಳಿಯಾಡುವ ಪಾದರಕ್ಷೆ ಧರಿಸಬೇಕು. ಹೊರಗಡೆ ತೆರಳುವ ವೇಳೆ ತಂಪು ಕನ್ನಡಕ, ಛತ್ರಿ, ಟವೆಲ್ ಅಥವಾ ಬಿಸಿಲಿನಿಂದ ಕಾಪಾಡಿಕೊಳ್ಳುವ ಸಾಮಾನ್ಯ ಕ್ರಮಗಳನ್ನು ಪಾಲಿಸಬೇಕು. ರೇಡಿಯೊ, ದೂರದರ್ಶನ ಹಾಗೂ ದಿನಪತ್ರಿಕೆಗಳಲ್ಲಿ ಬಿಸಿಯಾದ ಗಾಳಿ ಅಥವಾ ಶಾಖ ತರಂಗ(ಹೀಟ್ ವೇವ್)ದ ಬಗ್ಗೆ ನೀಡುವ ಮಾಹಿತಿ ಅನುಸಾರ ದೈನಂದಿನ ಚಟುವಟಿಕೆಗಳನ್ನು ಯೋಜಿಸಿಕೊಳ್ಳಬೇಕು.

ಬಿಸಿಲಿನಲ್ಲಿ ಹೊರಗಡೆ ಕಾರ್ಯನಿರ್ವಹಿಸುವವರು (ಜಮೀನು ಕೆಲಸ, ರಸ್ತೆ ಕಾಮಗಾರಿ ಮುಂತಾದವು) ಆದಷ್ಟು ಬೆಳಗ್ಗೆ 11 ಗಂಟೆಯ ಒಳಗೆ ಮತ್ತು ಸಂಜೆ 4 ಗಂಟೆ ನಂತರ ಕೈಗೊಳ್ಳುವುದು ಉತ್ತಮ. ಈ ಅವಧಿಯಲ್ಲಿ ಶ್ರಮದಾಯಕ ಕೆಲಸಗಳಿಂದ ವಿಶ್ರಾಂತಿ ಪಡೆಯಬೇಕು. ಬಿಸಿಲಿನಲ್ಲಿ ನಡೆಯುವಾಗ ಕಡ್ಡಾಯವಾಗಿ ಚಪ್ಪಲಿ ಧರಿಸಿ. ಟೀ ಅಥವಾ ಕಾಫಿ, ಹೆಚ್ಚು ಸಕ್ಕರೆ ಅಂಶವನ್ನು ಹೊಂದಿರುವ ಕಾರ್ಬೋನೇಟೆಡ್ ಪಾನೀಯ ಹಾಗೂ ಮದ್ಯಪಾನದಿಂದ ದೂರವಿರಿ.

ವ್ಯಕ್ತಿ ತೊದಲು ಮಾತು ಅಥವಾ ಅರ್ಥ ರಹಿತವಾಗಿ ಬಡಬಡಿಸಿದಲ್ಲಿ ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿ. ಕೆಳಗೆ ಮಲಗಿಸಿ ಕಾಲುಗಳನ್ನು ಮೇಲಕ್ಕೆ ಎತ್ತಿ ವಿಶ್ರಾಂತಿ ಪಡೆಯಿರಿ. ಬಿಸಿಗಾಳಿ ಮತ್ತು ಅತಿಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆಗಳು ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ ಅಥವಾ 108 ಅಥವಾ 102ಕ್ಕೆ ಕರೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರ ಪ್ರವಾಸ ಹಾಸ್ಟೆಲ್, ಬಸ್ ನಿಲ್ದಾಣ, ಕಾರಾಗೃಹ,ಪೊಲೀಸ್ ಠಾಣೆಗಳಿಗೆ ಭೇಟಿ

ಅಹವಾಲು ಆಲಿಸಿದರು. ಸಿಸಿ ಟಿವಿ ನಿರ್ವಹಣೆಗಳ ಬಗ್ಗೆ ಕೇಳಿದರು. ಜೈಲಿನ ಸಹಾಯಕ ಅಧೀಕ್ಷಕರಾದ ಅನಿತಾ ಎಸ್ ಹಿರೇಮನಿ ಅವರು ಜೈಲ್ ನಿರ್ವಹಣೆಯ ಬಗ್ಗೆ ಆಯೋಗಕ್ಕೆ ಮಾಹಿತಿ ನೀಡಿದರು.

ಬಳಿಕ ನಗರದ ಸದರ ಬಜಾರ್ ಪೊಲೀಸ್ ಠಾಣೆಗೆ ಭೇಟಿ ನೀಡಿದರು. ಈ ವೇಳೆ ಠಾಣೆಯ ಕ್ರೈಮ ರಿಜಿಸ್ಟರ್ ಪಿಎಸ್ ಆರ್ ಪರಿಶೀಲಿಸಿದರು. ಇದೆ ವೇಳೆ, ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ ಮಕ್ಕಳ ಸ್ನೇಹಿ ಕೊಠಡಿ ವೀಕ್ಷಿಸಿ ವ್ಯಕ್ತಪಡಿಸಿದರು.ಈ ವೇಳೆ ನಗರಸಭೆ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಾ, ತಹಸೀಲ್ದಾರ ಸುರೇಶ ವರ್ಮಾ, ತಾಪಂ ಇಓ ಚಂದ್ರಶೇಖರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರವೀಣಕುಮಾರ ಹಾಗೂ ಇನ್ನಿತರರು ಇದ್ದರು. ರಾಯಚೂರು ಒಪೆಕ್ ಆಸ್ಪತ್ರೆಗೆ ಮಾನವ ಹಕ್ಕುಗಳ ಆಯೋಗ ಭೇಟಿ; ಪರಿಶೀಲನೆ : ರಾಯಚೂರು ಪ್ರವಾಸದಲ್ಲಿ ಮಾರ್ಚ 25ರಂದು ವಿವಿಧೆಡೆ ಭೇಟಿ ಕೈಗೊಂಡ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು ಸಂಜೆ 6 ಗಂಟೆ ವೇಳೆಗೆ ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ತೆರಳಿ ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ಖುದ್ದು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು.

ಆಸ್ಪತ್ರೆ ಪ್ರವೇಶದ ವೇಳೆ, ಒಬ್ಬ ರೋಗಿಯು ಟ್ರಾಲಿ ಮೇಲೆ, ಮತ್ತೊಬ್ಬರು ನೆಲದ ಮೇಲೆ ಮಲಗಿರುವುದನ್ನು ಅಧ್ಯಕ್ಷರು ಹಾಗೂ ಸದಸ್ಯರು ನೋಡಿ, ರೋಗಿಗಳ ಅಹವಾಲು ಆಲಿಸಿದರು. ನಾವು ನೆನ್ನೆಯೇ ಬಂದಿದ್ದೇವೆ. ಇದುವರೆಗೆ ಬೆಡ್ ನೀಡಿಲ್ಲ. ಮರುದಿನ ಬೆಳಗ್ಗೆ ರಕ್ತ ಪರೀಕ್ಷೆ ಮಾಡಿದ್ದಾರೆ ಎಂದು ರೋಗಿಯೊಬ್ಬರು ತಿಳಿಸಿದರು.

ಇದುವರೆಗೆ ಯಾಕೆ ಬೆಡ್ ನೀಡಿಲ್ಲ? ಈ ರೀತಿ ನಿರ್ಲಕ್ಷ್ಯ ಮಾಡಬೇಡಿ ಎಂದು ವೈದ್ಯರ ಕಾರ್ಯವೈಖರಿಗೆ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು.ರಿಮ್ಸ್ ನಿರ್ದೇಶಕರಾದ ಡಾ.ರಮೇಶ, ಒಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್ ಅವರು ಆಗಮಿಸಿ ಆಯೋಗಕ್ಕೆ ಮಾಹಿತಿ ನೀಡಿದರು. ಈ ವೇಳೆ ಡಾ.ಮುರಳೀರಾವ್, ಡಾ.ಗೋಪಿನಾಥ, ಡಾ.ಮಂಜುನಾಥ ಹಟ್ಟಿ, ಡಾ.ವೀರೇಶ ಇದ್ದರು.

ಸಿರವಾರ ಸಮುದಾಯ ಅರೋಗ್ಯ ಕೇಂದ್ರದಲ್ಲಿ ವಿಶ್ವ ಕ್ಷಯ ರೋಗ ಆಚರಣೆ

ಸಾವಿರ ವರ್ಷದ ಇತಿಹಾಸ ಇದೆ ಕ್ಷಯ ರೋಗವು ಒಂದು ಸಾಂಕ್ರಾಮಿಕ ರೋಗವಾಗಿದ್ದು ಇದು ಒಬ್ಬರಿಂದ ಒಬ್ಬರಿಗೆ ಗಾಳಿಯ ಮೂಲಕ ಹರಡುತ್ತದೆ ಸಾಮಾನ್ಯವಾಗಿ ಕ್ಷಯರೋಗದ 2 ವಿಧಾನಗಳು ಎಂದರೆ ಶ್ವಾಸಕೋಶದ ಕ್ಷಯ, ಶ್ವಾಸಕೋಶೇತರ ಕ್ಷಯ ಈ ಎರಡು ರೀತಿಯ ರೋಗಳನ್ನು ನೋಡೊಬಹುದು ಪ್ರಮುಖವಾಗಿ ಒಬ್ಬ ಕ್ಷಯ ರೋಗಿ ಚಿಕಿತ್ಸೆ ಪಡೆಯದೆ ಹೋದರೆ ಆತನ ಒಂದು ವರ್ಷದಲ್ಲಿ 10-15 ಜನಕ್ಕೆ ಕ್ಷಯ ರೋಗವನ್ನು ಅರಡಿಸಬಲ್ಲನು ಹಾಗಾಗಿ ಮಾನ್ಯ ಪ್ರದಾನ ಮಂತ್ರಿಗಳಾದ ನರೇಂದ್ರ ಮೋದಿಯವರು ನಮ್ಮ ಭಾರತ ಕ್ಷಯ-ರೋಗ ಮುಕ್ತ ಮಾಡಲು ಪಣತೊಟ್ಟಿದು ಹಾಗಾಗಿ ನಮ್ಮ ದೇಶವನ್ನು ಕ್ಷೇಯ ಮುಕ್ತ ಭಾರತ ಮಾಡಲು ಪ್ರತಿಯೊಬ್ಬರು ಸಹಕರಿಸಬೇಕು

ಕ್ಷಯ ರೋಗದ ಲಕ್ಷಣಗಳಾದ :- ಎರಡು ವಾರಕ್ಕಿಂತ ಹೆಚ್ಚು ಕೆಮ್ಮು ಇರುವುದು, ಕಫ ಕಟ್ಟುವುದು, ಕಫದಲ್ಲಿ ರಕ್ತ ಬೀಳುವುದು, ಹಸಿವು ಆಗದೇ ಇರುವುದು, ತೂಕ ಆಗುವುದು ಈ ರೀತಿಯ ಲಕ್ಷಣಗಳು ವ್ಯಕ್ತಿಯ ಕಂಡು ಬಂದಲ್ಲಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ಕಫ ಪರೀಕ್ಷೆ ಅಥವಾ ಎಕ್ರೆ ಮಾಡಿಸುವುದು ಮೂಲಕ ಕ್ಷಯ ರೋಗವನ್ನು ದೃಢಪಡಿಸಿಕೊಂಡು ಆರು ತಿಂಗಳ ಸರಿಯಾಗಿ ನಿರಂತರವಾಗಿ ಚಿಕಿತ್ಸೆ ಪಡೆದಲ್ಲಿ ಕ್ಷಯರೋಗದಿಂದ ಸಂಪೂರ್ಣವಾಗಿ ಗುಣಮುಖರಾಗಬಹುದು,

ನಂತರ ಡಾ. ಜ್ಞಾನ ಸುಂದರಿ ಮಹಾತ್ವಕಾಂಕ್ಷಿ ತಾಲ್ಲೂಕ್ ಸಂಯೋಜಕರು ಮಾತನಾಡಿ ಕ್ಷಯ ಮುಕ್ತ ಸಿರವಾರ ತಾಲೂಕು ಮಾಡಲು ಸಹಕರಿಸುವಂತೆ ತಿಳಿಸಿದರು

ನಂತರ ದೇವರಾಜ್ ಕ್ರೈ ಸಂಸ್ಥೆಯ ತಾಲ್ಲೂಕ್ ಸಂಯೋಜಕರು ಅವರು ಒಂದು ಕುಟುಂಬ ಆರೋಗ್ಯದಿಂದ ಸುರಕ್ಷಿತವಾಗಿದ್ದರೆ ಒಂದು ಗ್ರಾಮ ಸುರಕ್ಷಿತವಾಗಿದಂತೆ ಹಾಗಾಗಿ ಸರ್ಕಾರದ ಚಿಕಿತ್ಸೆ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಂಡು ಮಾತ್ರ ಪ್ರತಿಯೊಬ್ಬರು ಆರೋಗ್ಯವಂತರಾಗಿ ಇರಬಹುದು ಎಂದು ಹೇಳಿದರು

ಈ ಸಂದರ್ಭದಲ್ಲಿ ಡಾ. ಸುರೇಶ್, ಶ್ರೀದೇವಿ ವಲಯ ಆರೋಗ್ಯ ಶಿಕ್ಷಣಾಧಿಕಾರಿಗಳು, ವಿದ್ಯಾರಾಣಿ ಫಾರ್ಮಸ್ ಅಧಿಕಾರಿಗಳು, ಸಿದ್ದಮ್ಮ ರಂಜನ್ ಬಿ ಸುರಕ್ಷಿತ ಅಧಿಕಾರಿಗಳು. ನಿರ್ಮಲ ಅಂಗನವಾಡಿ ಮೇಲ್ವಿಚಾರಕರು ಮತ್ತು ಆಶಾ - ಅಂಗನವಾಡಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು

ಸ್ಥಳೀಯ ಪತ್ರಕರ್ತರ ಕಾರ್ಯಕ್ಷಮತೆಯೂ ಹೆಚ್ಚಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ಗ್ಯಾರಟಿ ಯೋಜನೆಗಳ ಅನು ಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ರಾದ ಪವನ್ ಕಿಶೋರ್ ಪಾಟೀಲ್ ಅವರು ಮಾತನಾಡಿ, ಕೆಲವು ಯೋಜನೆಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲುದಾರಿಕೆ ಇರುತ್ತದೆ. ಆದ್ದರಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಗ್ಗೂ ಡಿ ಯೋಜನೆಗಳ ಅನುಷ್ಠಾನಕ್ಕೆ ಶ್ರಮಿ ಸಬೇಕು. ಜನತೆಗೆ ತಿಳಿಯುವ ಭಾಷೆ ಯಲ್ಲಿ ಯೋಜನೆಗಳ ಪ್ರಚಾರ ಕಾರ್ಯ ಆಗಬೇಕು. ಬಹಳಷ್ಟು ಯೋಜನೆಗಳ ಮಾಹಿತಿ ಆನಲೈನ ದಲ್ಲಿ ಲಭ್ಯವಿದ್ದು, ಕನ್ನಡ ಭಾಷೆ ಯಲ್ಲಿ ಬುಕ್ ಲೆಟ್ ಸಿದ್ದಪಡಿಸಿ ಸಾಮಾನ್ಯ ಜನರಿಗೆ ತಿಳಿಸುವ ಕಾರ್ಯವಾಗಬೇಕು ಎಂದರು.

ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇ ಶಕರಾದ ಎಚ್ ಜಿ ರವೀಂದ್ರ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳ ಪ್ರಚುರಪಡಿಸಲು ಪತ್ರಕರ್ತರು ಹೆಚ್ಚಿನ ಒತ್ತು ಕೊಡ ಬೇಕು ಎಂದು ಮನವಿ ಮಾಡಿದರು. ಬಡವರು, ಮಹಿಳೆಯರು, ಯುವ ಕರು, ರೈತರು ಸೇರಿದಂತೆ ಎಲ್ಲ ವರ್ಗ ದ ಜನರಿಗೆ ಪ್ರಧಾನ ಮಂತ್ರಿಗಳು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಈ ಯೋಜನೆಗಳ ಬಗ್ಗೆ ವ್ಯಾಪಕ ಮಾಹಿತಿ ಜನತೆಗೆ ತಲುಪಿಸುವ ಕಾರ್ಯ ಆಗಬೇಕಿದೆ ಎಂದರು. ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಅವರು ಮಾತ ನಾಡಿ, ಭಾರತ ಸರ್ಕಾರದ ವಾರ್ತಾ ಶಾಖೆಯಿಂದ ರಾಯ ಚೂರು ಜಿಲ್ಲೆ ಯಲ್ಲಿ ಪತ್ರಕರ್ತರಿಗೆ ಕಾರ್ಯಾಗಾರ ಹಮ್ಮಿಕೊಂಡಿದ್ದು ಶ್ಲಾಘನೀಯ ಕಾರ್ಯ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾದ ಆರ್ ಗುರುನಾಥ್ ಅವರು ಮಾತನಾಡಿ, ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ರಾಯಚೂರು ಜಿಲ್ಲೆ ಯಲ್ಲಿ ಬಹುತೇಕ ಸಣ್ಣ ಪತ್ರಿಕೆಗಳು ಸ್ವತಂತ್ರವಾಗಿ ಮುದ್ರಣ ಯಂತ್ರ ಗಳನ್ನು ಹೊಂದಿ ಉತ್ತಮವಾಗಿ ಮುದ್ರಣವಾಗುತ್ತಿವೆ ಎಂದು ತಿಳಿಸಿದರು.

ರಾಯಚೂರು ರಿಪೋರ್ಟರ್ಸ ಗಿಲ್ಡನ ಜಿಲ್ಲಾ ಅಧ್ಯಕ್ಷರಾದ ವಿಜಯ ಕುಮಾರ ಜಾಗಟಗಲ್ ಅವರು ಮಾತನಾಡಿ, ಯೋಜನೆಗಳ ಪ್ರಚಾ ರದ ಜೊತೆಗೆ ಆ ಯೋಜನೆಗಳ ಅನುಷ್ಠಾನದಲ್ಲಿನ ಸಾಧಕ ಬಾಧಕಗಳ ಬಗ್ಗೆ ಸಹ ನಿರಂತರವಾಗಿ ಚರ್ಚಿಸುವ ಕಾರ್ಯ ಆಗಬೇಕು ಎಂದು ತಿಳಿಸಿದರು. ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಮಾತನಾ ಡಿದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್ ಜೆ ಕುಮಾರ ಸ್ವಾಮಿ, ಜಿಪಂ ಯೋಜನಾ ನಿರ್ದೇ ಶಕರಾದ ಶರಣ ಬಸವರಾಜ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾ ಣಾಧಿಕಾರಿ ಡಾ.ಸುರೇಂದ್ರಬಾಬು ಸೇರಿದಂತೆ ಇತರರು ಉಪಸ್ಥಿತರಿ ದ್ದರು. ಭಾರತ ಸರ್ಕಾರದ ವಾರ್ತಾ ಶಾಖೆಯ ಸಹಾಯಕ ನಿರ್ದೇಶಕ ರಾದ ಮಧು ಸ್ವಾಗತಿಸಿದರು.

ಉತ್ತರ ಕರ್ನಾಟಕದ ಮೊಟ್ಟಮೊದಲ ಎನ್-ಜೆನ್ ಅಂಚೆ ಕಚೇರಿ ಉದ್ಘಾಟನೆ

ವೆಂಡಿಗ್ ಯಂತ್ರ ಅಳವಡಿಸಲಾಗಿದೆ ಎಂದರು.

ಈ ವೇಳೆ ಧಾರವಾಡದ ಉತ್ತರ ಕರ್ನಾಟಕದ ಅಂಚೆ ಸೇವೆಗಳ ನಿರ್ದೇಶಕರಾದ ಶ್ರೀಹರ್ಷ ಎನ್. ಅವರು ಮಾತನಾಡಿ, 1997ರ ಮಧ್ಯದಿಂದ 2012ರ ಮೊದಲ ಭಾಗದವರೆಗೆ ಜನಿಸಿದ ಮಕ್ಕಳನ್ನು ನಾವು ಎನ್-ಜೆನ್ ಯುಗದವರು ಎಂದು ಕರೆಯಲಾಗುತ್ತದೆ. ಈ ಯುಗದಲ್ಲಿ ಹುಟ್ಟಿದ ಮಕ್ಕಳು ಜಗತ್ತಿನಲ್ಲಿ ಪ್ರಾರಂಭವಾದ ಕೌತುಕ ಮೂಡಿಸುವ ತಾಂತ್ರಿಕ ಯುಗದೊಂದಿಗೆ ಬೆಳೆದವರು. ಅದಲ್ಲದೆ ಈ ಮಕ್ಕಳು ಹೊಸ ಹೊಸ ಸಂಸ್ಕೃತಿ ಹಾಗೂ ವಿಭಿನ್ನ ಕಲೆಯನ್ನು ತಮ್ಮೊಂದಿಗೆ ಬೆಳೆಸಿಕೊಂಡು ಬರುತ್ತಿದ್ದಾರೆ. ಹೀಗಾಗಿ ಈ ಯುಗದ ಮಕ್ಕಳನ್ನು ಎನ್-ಜೆನ್ ಎಂದು ಕರೆಯುತ್ತಿದ್ದು, ವಿದ್ಯಾರ್ಥಿಗಳಿಗೆ ಬೇಕಾಗುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಪೋಸ್ಟ್ ಆಫೀಸ್ ನಲ್ಲಿ ಇದೆ. ಇದರ ಲಾಭವನ್ನು ಪಡೆಯಬೇಕು ಎಂದರು.

ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಲೆಂಬ ಕಲ್ಪನೆಯಿಂದ ಈ ಕಚೇರಿ ಸ್ಥಾಪಿಸಲಾಗಿದೆ. ಇದು ವಿದ್ಯಾರ್ಥಿಗಳಿಂದ ವಿದ್ಯಾರ್ಥಿಗಳಿಗಾಗಿ ಎಂಬ ಧ್ಯೇಯವಾಕ್ಯದಡಿ ಕಾರ್ಯನಿರ್ವಹಿಸಲಿದೆ. ಇದು ಪಾರ್ಸೆಲ್ ಪ್ಯಾಕೇಜಿಂಗ್ ಸೇವೆಗಳನ್ನು ಸಹ ಒದಗಿಸಲಿದೆ. ವಿದ್ಯಾರ್ಥಿಗಳ ಸಮಯ ಉಳಿಸಿ, ಒತ್ತಡ ಕಡಿಮೆ ಮಾಡುತ್ತದೆ. ಅಲ್ಲದೆ, ಅಧ್ಯಯನ ಮಾಡುವ ಸ್ಥಳದಿಂದ ನೇರ ಅವರ ವಸ್ತುಗಳನ್ನು ಸಾಗಿಸಲು ಅಥವಾ ಕಳುಹಿಸಲು ಸುಲಭ ಮತ್ತು ಸುರಕ್ಷಿತ ಸ್ಥಳವಾಗಿದೆ. ಭಾರತೀಯ ಅಂಚೆಯು ದೇಶಾದ್ಯಂತ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಇಂತಹ ಎನ್-ಜೆನ್ ಅಂಚೆ ಕಚೇರಿಗಳನ್ನು ವಿಸ್ತರಿಸಲಾಗಿದೆ ಎಂದರು.

ಈ ವೇಳೆ ಧಾರವಾಡದ ಎನ್.ಕೆ. ಪ್ರದೇಶ ಸಹಾಯಕ ಪೋಸ್ಟ್ ಮಾಸ್ಟರ್ ಜನರಲ್ (ಬಿಡಿ) ಎಚ್.ಎಂ.ಮಜೇಶ್ ಅವರು ಮಾತನಾಡಿ, ಕರ್ನಾಟಕದ 3ನೇ ಹಾಗೂ ಉತ್ತರ ಕರ್ನಾಟಕ ಮೊದಲ ಕಚೇರಿಯಾಗಿದೆ. ಕಲ್ಯಾಣ ಕರ್ನಾಟಕ ಭಾಗವು ಹಿಂದುಳಿದ ಪ್ರದೇಶವಾಗಿದೆ. ಇಂತಹ ಹಿಂದುಳಿದ ಪ್ರದೇಶದ ಅಭಿವೃದ್ಧಿಗಾಗಿ ನಮ್ಮ ಇಲಾಖೆಯಿಂದ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದರು.

ಯುವ ಜನಾಂಗವು ಕಚೇರಿಗೆ ಬರುವಂತೆ ಮಾಡಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅತಿಕಡಿಮೆ ಖರ್ಚಿನಲ್ಲಿ ಸೇವೆಯನ್ನು ಒದಗಿಸುತ್ತಿದೆ. ಅವುಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು. ಅಂಚೆ ಕಚೇರಿಯಲ್ಲಿ ಬ್ಯಾಂಕ್ ವ್ಯವಹಾರ ಸಹ ಮಾಡಬಹುದಾಗಿದೆ. ಅಂಚೆ ಕಚೇರಿ ಬಗ್ಗೆ ತಿಳಿದುಕೊಳ್ಳಬೇಕು. ಕಡಿಮೆ ಬೆಲೆಯಲ್ಲಿ ದೊಡ್ಡ ಮಟ್ಟದ ಉಳಿತಾಯ ಮಾಡಬಹುದಾಗಿದೆ. ಅಲ್ಲದೆ ಉತ್ತಮ ರೀತಿಯ ಜೀವಾ ವಿಮೆ ಸೇವೆಗಳು ಸಹ ಇಲಾಖೆಯಿಂದ ಒದಗಿಸಲಾಗು ತ್ತಿದ್ದು, ಸರ್ಕಾರದ ಪ್ರತಿಯೊಂದು ಯೋಜನೆ, ಸೌಲಭ್ಯಗಳನ್ನು ಚೆನ್ನಾಗಿ ಬಳಸಿಕೊಳ್ಳಬೇಕೆಂದರು.

ಈ ವೇಳೆ ಎಂ.ಎಸ್. ಆಗ್ರಿ ವಿದ್ಯಾರ್ಥಿನಿ ಯಾದ ಅಂಕಿತಾ ಅವರು ಮಾತನಾಡಿ, ಉತ್ತಮ ಗುಣಮಟ್ಟದ ಸೇವೆಗಳನ್ನು ಅಂಚೆ ಇಲಾಖೆಯಿಂದ ನೀಡಲಾಗುತ್ತದೆ. ಇಲಾಖೆಗೆ ವಿದ್ಯಾರ್ಥಿಗಳ ಸಮೂಹದಿಂದ ಇಲಾಖೆಗೆ ಅಭಿನಂದನೆಗಳು ತಿಳಿಸಲು ಸಂತೋಷವಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್., ಕೃಷಿ ವಿಶ್ವವಿದ್ಯಾಲಯದ ರವಿಶಂಕರ್, ರಾಯಚೂರು ವಿಭಾಗದ ಅಂಚೆ ಇಲಾಖೆಯ ವಿಭಾಗೀಯ ಕಚೇರಿಯ ಕಚೇರಿ ಸಹಾಯಕ ಕಿರಣ್ ಕುಮಾರ್ ಜಿ., ಕಚೇರಿ ಸಹಾಯಕಿ ಹೀರಾಬಾಯಿ, ಸಹಾಯಕ ಅಂಚೆ ಅಧೀಕ್ಷಕರ ಪಿ ಚಿದಾನಂದ್, ಡಿ.ಎಂ.ಶರಣಪ್ಪ, ಅಂಚೆ ಇಲಾಖೆಯ ಶ್ರೀಪಾದ ಶಿವಂಗಿ ಸೇರಿದಂತೆ ಇತರರು ಇದ್ದರು.

ಕಾಳ ಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡಿದಲ್ಲಿ ಏಜೆನ್ಸಿ ಗಳ ಪರವಾನಿಗೆ ರದ್ದುಪಡಿಸಲಾಗುವುದು : ಡಿ.ಸಿ

ಕಲಬುರಗಿ,ಮಾ.25-

ಮಧ್ಯ ಪ್ರಾಚ್ಯ ದೇಶದಲ್ಲಿನ ಯುದ್ದದ ಹಿನ್ನೆಲೆಯಲ್ಲಿ ಜನ ಆತಂಕಗೊಂಡು ಸಿಲಿಂಡಿರ್ ಬುಕ್ಕಿಂಗ್ ಮಾಡುತ್ತಿದ್ದು, ಇದನ್ನೆ ಬಂಡವಾಳ ಮಾಡಿಕೊಂಡು ಕಾಳ ಸಂತೆಯಲ್ಲಿ ಸಿಲಿಂಡಿರ್ ಮಾರಾಟ, ಅನಧಿಕೃತ ಫಿಲ್ಲಿಂಗ್ ಮಾಡಿದಲ್ಲಿ ಅಂತಹ ಏಜೆನ್ಸಿ ಗಳ ಪರವಾನಿಗೆ ರದ್ದುಪಡಿಸಿ ಅಗತ್ಯ ವಸ್ತುಗಳ ಕಾಯ್ದೆಯಡಿ ಕಪ್ಪು ಪಟ್ಟಿಗೆ ಸೇರಿಸಲಾಗುವುದು ಎಂದು ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್ ಅವರು ಗ್ಯಾಸ್ ಏಜೆನ್ಸಿ ಗಳ ಮುಖ್ಯಸ್ಥರಿಗೆ ಸೂಚನೆ ನೀಡಿದ್ದಾರೆ.

ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಐ.ಓ.ಸಿ.ಎಲ್, ಹೆಚ್.ಪಿ.ಸಿ.ಎಲ್., ಬಿ.ಪಿ.ಸಿ.ಎಲ್ ಕಂಪನಿ ಅಧಿಕಾರಿಗಳು ಮತ್ತು ಡೀಲರ್‌ಗಳೊಂದಿಗೆ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರ ಸುರಕ್ಷತೆಯಲ್ಲಿ ಯಾವುದೇ ಲೋಪವಾಗದಂತೆ ಗ್ಯಾಸ್ ಏಜೆನ್ಸಿ ಗಳು ಕಾರ್ಯನಿರ್ವಹಿಸಬೇಕು. ಇನ್ನು ಫಿಫೋ (ಮೊದಲು ನೊಂದಾಯಿಸಿದವರಿಗೆ ಮೊದಲು ವಿಲೇವಾರಿ) ಮಾದರಿಯಲ್ಲಿ ಸಿಲಿಂಡರ್ ಸರಬರಾಜು ಮಾಡಬೇಕು ಎಂದರು.



ಜಿಲ್ಲೆಯ ಯಾವುದೇ ಆರೋಗ್ಯ ಸಂಸ್ಥೆಗಳಿಗೆ ಸಿಲಿಂಡಿರ್ ಸಮಸ್ಯೆ ಆಗದಂತೆ ಎಚ್ಚರಿಕೆ ವಹಿಸಬೇಕು. ವಿಶೇಷವಾಗಿ ಬಡವರಿಗೆ ರಿಯಾಯಿತಿ ದರದಲ್ಲಿ ನೀಡುವ ಇಂದಿರಾ ಕ್ಯಾಂಟೀನ್ ಗೂ ಸಿಲಿಂಡರ್ ಸಮಸ್ಯೆ ಆಗಬಾರದು. ಸಿಲಿಂಡರ್ ಮಾರಾಟದ ಕುರಿತು ಪ್ರತಿ ನಿತ್ಯ ಆವಕ ಮತ್ತು ಜಾವಕದ ಕುರಿತು ಜಿಲ್ಲಾಡಳಿತಕ್ಕೆ ವರದಿ ನೀಡಬೇಕು. ಇನ್ನು ತಾಲೂಕಾವಾರು ಸಿಲಿಂಡರ್ ಗ್ಯಾಸ್ ಏಜೆನ್ಸಿ ಗಳ ಮೇಲೆ ತೀವ್ರ ನಿಗಾ ವಹಿಸಲು ಅಧಿಕಾರಿಗಳ ತಂಡ ಸಹ ರಚಿಸಲಾಗುತ್ತಿದೆ. ಅಗತ್ಯ ಪ್ರಮಾಣದಲ್ಲಿ ದಾಸ್ತಾನಿದ್ದರೂ ಜನ ಆತಂಕಗೊಂಡಿದ್ದು, ಇಂತಹ ಒಂದು ಬಿಕ್ಕಟ್ಟು ಪರಿಸ್ಥಿತಿಯಲ್ಲಿ ಗ್ಯಾಸ್ ಏಜೆನ್ಸಿ ಗಳು ಜಿಲ್ಲಾಡಳಿತದ ನಿರ್ದೇಶನ ಪಾಲಿಸುವ ಮೂಲಕ ಅಗತ್ಯ ಸಹಕಾರ ನೀಡಬೇಕು. ಇನ್ನು ಏಜೆನ್ಸಿ ಗಳು ಸಹ ಸಾರ್ವಜನಿಕರಿಗೆ ಸಿಲಿಂಡರ್ ಸಮಸ್ಯೆ ಇಲ್ಲ ಎಂಬುದನ್ನು ಖಾತ್ರಿಪಡಿಸಬೇಕು ಎಂದರು.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಮಾತನಾಡಿ, ಕೃತಕ ಸಿಲಿಂಡರ್ ಸಮಸ್ಯೆ ಸೃಷ್ಠಿ ಮಾಡಬಾರದು. ಅವಶ್ಯಕತೆ ಇದ್ದಲ್ಲಿ ಏಜೆನ್ಸಿ , ದಾಸ್ತಾನು ಘಟಕಗಳಿಗೆ ಪೊಲೀಸ್ ಭದ್ರತೆ ಸಹ ನೀಡಲಾಗುವುದು. ಈ ಕುರಿತು ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಿದಲ್ಲಿ ಪೊಲೀಸರ ನೆರವು ಸಿಗಲಿದೆ ಎಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮಾತನಾಡಿ, ಜಿಲ್ಲೆಯಾದ್ಯಂತ ಅಂಗನವಾಡಿ, ಶಾಲೆ, ವಸತಿ ಶಾಲೆ, ವಸತಿ ನಿಲಯಗಳಿಗೆ ಸಿಲಿಂಡರ್ ಸಮಸ್ಯೆಯಾಗದಂತೆ ಗ್ಯಾಸ್ ಏಜೆನ್ಸಿ ಗಳು ಎಚ್ಚರಿಕೆ ವಹಿಸಬೇಕು ಎಂದರು. ಆಹಾರ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಮುನಾವರ್ ದೌಲಾ ಮಾತನಾಡಿ, ಪ್ರಸ್ತುತ ಜಿಲ್ಲೆಯಲ್ಲಿ 47 ಗ್ಯಾಸ್ ಡೀಲರ್‌ಗಳಿದ್ದು, ಇದರಲ್ಲಿ 3,26,674 ಸಿಂಗಲ್ ಸಿಲಿಂಡರ್ ಮತ್ತು 2,32,294 ಡಬಲ್ ಸಿಲಿಂಡರ್ ಗ್ರಾಹಕರಿದ್ದಾರೆ. ಇದಲ್ಲದೆ 10,372 ವಾಣಿಜ್ಯ ಸಿಲಿಂಡರ್ ಗ್ರಾಹಕರಿದ್ದು, 2,68,391 ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳಿದ್ದಾರೆ. ಪಿ.ಎಂ.ಉಜ್ವಲ್ ಯೋಜನೆಯ ಗ್ರಾಹಕರಿಗೆ 45 ದಿನಕ್ಕೆ ಮತ್ತು ಇತರೆ ಗ್ರಾಹಕರಿಗೆ ಸಿಲಿಂಡರ್ ಬುಕ್ ಮಾಡಲು ಹಿಂದಿನ ಡೆಲವರಿಗೆ ಕನಿಷ್ಠ 25 ದಿನ ಅಂತರವಿರಬೇಕು ಎಂದು ಸಭೆಗೆ ಮಾಹಿತಿ ನೀಡಿದಲ್ಲದೆ, ಮಂಗಳವಾರಕ್ಕೆ 12,709 ಗೃಹ ಬಳಕೆ ಸಿಲಿಂಡರ್ ಮತ್ತು 1,030 ವಾಣಿಜ್ಯ ಸಿಲಿಂಡರ್ ಜಿಲ್ಲೆಯಲ್ಲಿ ದಾಸ್ತಾನು ಇದ್ದು, ಯಾವುದೇ ಸಿಲಿಂಡರ್ ಸಮಸ್ಯೆ ಇಲ್ಲ ಎಂದು ವಿವರಿಸಿದರು.

ಸಿಲಿಂಡರ್ ಲಭ್ಯ, ಆತಂಕ ಬೇಡ :

ಜಿಲ್ಲೆಯಲ್ಲಿ ಯಾವುದೇ ರೀತಿಯಲ್ಲಿ ಸಿಲಿಂಡರ್ ಕೊರತೆ ಇಲ್ಲ. ಪ್ರತಿನಿತ್ಯ ಬೇಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಕಂಪನಿಗಳು ಸಿಲಿಂಡರ್ ಪೂರೈಸುತ್ತಿವೆ. ಸಾರ್ವಜನಿಕರು ಆತಂಕಗೊಳ್ಳಬಾರದು.

ಎಸ್ಸೆಸ್ಸೆಲ್ಸಿಯ ದ್ವಿತೀಯ ಭಾಷೆಗೆ 664 ವಿದ್ಯಾರ್ಥಿಗಳು ಗೈರು

ರಾಯಚೂರು ಮಾ.25 ಜಿಲ್ಲೆಯಲ್ಲಿ ಮಾರ್ಚ್ 25ರ ಬುಧವಾರ ದಂದು 101 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ದ್ವಿತೀಯ ಭಾಷೆ ವಿಷಯದಲ್ಲಿ ಒಟ್ಟು 29,926 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 664 ವಿದ್ಯಾರ್ಥಿಗಳು ಗೈರಾಗಿದ್ದಾರೆ.

ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ 3965 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 79 ವಿದ್ಯಾರ್ಥಿಗಳು ಗೈರಾಗಿದ್ದಾರೆ, ಲಿಂಗಸುಗೂರು ತಾಲ್ಲೂಕಿನಲ್ಲಿ 6095 ಹಾಜರಾಗಿ 113 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲ್ಲೂಕಿನಲ್ಲಿ 5367 ವಿದ್ಯಾರ್ಥಿಗಳು ಹಾಜರಾಗಿ 164 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲ್ಲೂಕಿನಲ್ಲಿ 8981 ಹಾಜರಾಗಿದ್ದು, 228 ವಿದ್ಯಾರ್ಥಿಗಳು ಗೈರಾಗಿದ್ದಾರೆ ಹಾಗೂ ಸಿಂಧನೂರು ತಾಲ್ಲೂಕಿನಲ್ಲಿ 5518 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 88 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏಪ್ರೀಲ್ ಮೊದಲ ವಾರದಲ್ಲಿ ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲ ಕೆರೆಗಳ ಭರ್ತಿಗೆ ಕ್ರಮ

ಪರಿಗಣಿಸಲಾಗುವುದು. ಕೆರೆಗಳಿಗೆ ನೀರು ತುಂಬಿಸದೇ ಬೇಜವಾಬ್ದಾರಿ ವಹಿಸಿರುವುದು ಗೊತ್ತಾದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆಯನುಸಾರ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಸಹಾಯಕ ಆಯುಕ್ತರು, ಎಲ್ಲ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಮತ್ತು ನೀರಾವರಿ ಇಲಾಖೆಯ ಅಧಿಕಾರಿಗಳು ಮತ್ತು ಇನ್ನಿತರ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಹಿಂದಿನ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಬಿಸಿಲಿನ ತಾಪಮಾನದ ಪ್ರಮಾಣ ಹೆಚ್ಚಾಗಿದೆ. ಲಿಂಗಸೂರು, ದೇವದುರ್ಗ, ರಾಯಚೂರಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿರುವುದಾಗಿ ಕಂಡು ಬಂದಿದೆ. ಜಿಲ್ಲೆಯಲ್ಲಿ ಈಗಾಗಲೇ 35 ಹಳ್ಳಿಗಳನ್ನು ಸಮಸ್ಯಾತ್ಮಕ ಹಳ್ಳಿಗಳೆಂದು ಗುರುತಿಸಿದ್ದು ಈ ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆ ಇದೆ. ಕಾಲುವೆಗಳಿಗೆ ನೀರು ಹರಿಸಲು ಇನ್ನು ಒಂದು ವಾರ ಸಮಯ ಇದ್ದು, ಅಷ್ಟರೊಳಗೆ ಸಹಾಯಕ ಆಯುಕ್ತರು, ಆಯಾ ತಾಲೂಕಿನ ಎಲ್ಲ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು ಎಲ್ಲ ಕಡೆಗೆ ಪ್ರವಾಸ ಕೈಗೊಂಡು ಖುದ್ದು ಭೇಟಿ ನೀಡಿ ನೀರಿನ ಸಮಸ್ಯೆ ಯಾವ ಕಡೆಗಿದೆ ಎಂಬುದನ್ನು ಗುರುತಿಸಿ ಅಲ್ಲಿ ನ್ಯಾಯ ವ್ಯವಸ್ಥೆಗೆ ಕ್ರಮವಹಿಸಬೇಕು. ಆಯಾ ಕಡೆಗಳಲ್ಲಿ ಕೆರೆಗಳ ನೀರಿನ ಸ್ಥಿತಿ ಹೇಗಿದೆ ಎಂಬುದರ ಬಗ್ಗೆ ವರದಿ ಸಿದ್ದಪಡಿಸಿ ಎಲ್ಲ ಕೆರೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಜಂಟಿ ಸಭೆಗೆ ಸೂಚನೆ: ಜಿಲ್ಲಾ ಉಸ್ತುವಾರಿ ಸಚಿವರು ಏಪ್ರೀಲ್ ಮೊದಲ ವಾರದಲ್ಲಿ ವಿಪತ್ತು ನಿರ್ವಹಣಾ ವಿಷಯದ ಬಗ್ಗೆ ಸಭೆ ನಡೆಸಲಿದ್ದಾರೆ. ಆ ಸಮಯದೊಳಗೆ ಕೆರೆಗಳ ಭರ್ತಿ ಸೇರಿದಂತೆ ಎಲ್ಲಾ ವ್ಯವಸ್ಥೆ ಮಾಡಬೇಕು. ಸಭೆಗೆ ಸರಿಯಾದ ಮಾಹಿತಿ ನೀಡಬೇಕು. ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಆಯಾ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾ ರಿಗಳು ಎಲ್ಲ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಜಂಟಿ ಸಭೆ ನಡೆಸಿ ಕೆರೆಗಳ ಪರಿಸ್ಥಿತಿ, ನೀರಿನ ಸಮಸ್ಯೆ ಎದುರಿಸುವ ಹಳ್ಳಿಗಳ ವಿವರ ಸೇರಿದಂತೆ ಎಲ್ಲ ಮಾಹಿತಿಯನ್ನು ಸಂಗ್ರಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಿರವಾರ ತಾಲೂಕಿನ ತಹಸೀಲ್ದಾರರು ಮತ್ತು ಇಓಗಳು ಹೆಚ್ಚಿನ ಕಾಳಜಿಯಿಂದ ಕೆಲಸ ಮಾಡಬೇಕು. ಸಿರವಾರ ತಾಲೂಕಿನ ಎಲ್ಲ ಹಳ್ಳಿಗಳಿಗೆ ಬೋರವೆಲ್ ಮೂಲಕವೇ ನೀರು ಪೂರೈಕೆಯಾಗುತ್ತಿದೆ ಎಂಬುದರ ಬಗ್ಗೆ ಗಮನ ಹರಿಸಿ ನೀರು ಸಿಗದ ಗ್ರಾಮಗಳಲ್ಲಿ ಖಾಸಗಿ ಬೋರವೆಲ್‌ಗಳ ಮೂಲಕ ನೀರು ಸರಬರಾಜು ಕಾರ್ಯ ಆಗಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಬೇಸಿಗೆ ಸಮಯದಲ್ಲಿ ಎಲ್ಲ ಅಧಿಕಾರಿಗಳು ಜಾಗೃತೆಯಿಂದ ಕಾರ್ಯನಿರ್ವ ಹಿಸಬೇಕು. ಕುಡಿಯುವ ನೀರಿಗೆ ಸಂಬಧಿಸಿದತೆ ಯಾವುದಾದರು ಹಳ್ಳಿಗಳಲ್ಲಿ ತೊಂದರೆ ಎದುರಾದರೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ದಾವಿಸಿ ಸ್ಪಂದಿಸಿ ಸಮಸ್ಯೆಯನ್ನು ತಮ್ಮ ಹಂತದಲ್ಲೇ ಇತ್ಯರ್ಥಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಿಯಮಿತ ಪರೀಕ್ಷೆ ನಡೆಸಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಧಿಕಾರಿಗಳಾದ ಈಶ್ವರ ಕಾಂದೂ ಅವರು ಮಾತನಾಡಿ, ಸಮಸ್ಯಾತ್ಮಕ ಹಳ್ಳಿಗಳಲ್ಲಿ ಖಾಸಗಿ ಬೋರವೆಲ್‌ಗಳನ್ನು ಗುರುತಿಸಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ವ್ಯವಸ್ಥೆ ಮಾಡಬೇಕು. ರಾಯಚೂರು ಮತ್ತು ಸಿಂಧನೂರ ನಗರಸಭೆ ವ್ಯಾಪ್ತಿಯಲ್ಲಿ ಮತ್ತು ಜಿಲ್ಲಾ ವ್ಯಾಪ್ತಿಯ ಎಲ್ಲ ಹಳ್ಳಿಗಳಲ್ಲಿ ಪರೀಕ್ಷಿಸಿದ ಬಳಿಕವೇ ಕುಡಿಯುವ ನೀರು ಪೂರೈಸಬೇಕು. ಕುಡಿಯುವ ನೀರಿನ ಪರೀಕ್ಷೆಯನ್ನು ನಿಯಮಿತವಾಗಿ ಮಾಡಬೇಕು ಎಂದು ಅವರು ನಿರ್ದೇಶನ ನೀಡಿದರು. ದೇವದುರ್ಗ, ಸಿರವಾರ ಮತ್ತು ಮಾನವಿಗಳಲ್ಲಿ ಟಾಸ್ಕಫೋರ್ಸ್ ಸಭೆಗೆ ಕೂಡಲೇ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಂಧನೂರ, ಮಾನವಿ, ಮಸ್ಕಿ, ಲಿಂಗಸೂರು, ಅರಕೇರಾ, ಸಿರವಾರ, ದೇವದುರ್ಗ, ರಾಯಚೂರು ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳು ಇದ್ದರು.

ಪಿ.ಎಂ ವಿಶ್ವಕರ್ಮ ಯೋಜನೆ ಹೆಸರಿನಲ್ಲಿ ಅವ್ಯವಹಾರ ಆರೋಪ : ಮಹಿಳೆಯರಿಂದ ಪ್ರತಿಭಟನೆ

ನ್ಯಾಯಕ್ಕಾಗಿ ಆಗ್ರಹಿಸಿದರು.

ಮಹಿಳೆಯರ ಆರೋಪದಂತೆ, ಯಾವುದೇ ಅಧಿಕೃತ ಅನುಮತಿ ಇಲ್ಲದೇ ಖಾಸಗಿ ಸಂಸ್ಥೆಯೊಂದು ನೂರಾರು ಮಹಿಳೆಯರಿಂದ ಹಣ ಸಂಗ್ರಹಿಸಿದೆ. ಬ್ಯಾಂಕ್ ಖಾತೆ ಹಾಗೂ ಆಧಾರ್ ವಿವರಗಳನ್ನು ನೀಡಿದರೆ ಮಾತ್ರ ಹೊಲಿಗೆ ಯಂತ್ರ ನೀಡಲಾಗುತ್ತದೆ ಎಂದು ನಂಬಿಸಲಾಗಿದೆ ಎನ್ನಲಾಗಿದೆ.

ಇದೇ ವೇಳೆ, ಯೋಜನೆ ಜಾರಿಗೆ ಯಾವುದೇ ಖಾಸಗಿ ಸಂಸ್ಥೆಯನ್ನು ನೇಮಿಸಿಲ್ಲವೆಂಬ ಮಾಹಿತಿ ಲಭ್ಯವಾಗಿದ್ದು, ₹400 ಸಂಗ್ರಹಕ್ಕೆ ಯಾರು ಅನುಮತಿ ನೀಡಿದರು ಎಂಬುದು ಸ್ಪಷ್ಟವಾಗಿಲ್ಲ. ಅನೇಕರು ಮೌಖಿಕ ದೂರು ನೀಡಿದರೂ ಜಿಲ್ಲಾ ಕೈಗಾರಿಕಾ ಇಲಾಖೆ ಮೌನ ವಹಿಸಿರುವುದು ಅನುಮಾನಕ್ಕೆ ಕಾರಣವಾಗಿದೆ.

ಡಿಸಿ ಕ್ರಮ : ಪ್ರಕರಣ ಜಿಲ್ಲಾಧಿಕಾರಿ ನಿತೀಶ್ ಅವರ ಗಮನಕ್ಕೆ ಬಂದ ಬಳಿಕ ತಕ್ಷಣ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ ನೇತೃತ್ವದಲ್ಲಿ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಕಚೇರಿ ತಪಾಸಣೆ ನಡೆಸಿ, ಸಂಬಂಧಿತ ಸಂಸ್ಥೆಯ ಕಚೇರಿಗೆ ಬೀಗ ಹಾಕಿ ವರದಿ ಸಲ್ಲಿಸಲು ಸೂಚಿಸಿದ್ದಾರೆ.

ಈ ಪ್ರಕರಣದ ಕುರಿತು ಸಂಪೂರ್ಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮಹಿಳೆಯರು ಆಗ್ರಹಿಸಿದ್ದಾರೆ.



ಬಿರುಗಾಳಿ, ಆಲಿಕಲ್ಲು ಮಳೆಯಿಂದ ಕೃಷಿ, ತೋಟಗಾರಿಕೆ ಬೆಳೆ ಹಾನಿ 3 ದಿನದಲ್ಲಿ ವರದಿ ಸಲ್ಲಿಸಲು ಸೂಚನೆ

ವಿಜಯಪುರ, ಮಾ.25

ಇತ್ತೀಚಿಗೆ ಬೀಸಿದ ಬಿರುಗಾಳಿ ಹಾಗೂ ಆಲಿಕಲ್ಲು ಮಳೆಯಿಂದಾಗಿ ಕೃಷಿ, ತೋಟಗಾರಿಕಾ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ಕೈಗೊಂಡು ಮೂರು ದಿನದೊಳಗಾಗಿ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ, ತೋಟಗಾರಿಕೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಬೆಳೆ ವಿಮಾ ಕಂಪನಿಯ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು. ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ತಂಡ ರಚಿಸಿ ಹಾನಿಗೊಳಗಾದ ಕ್ಷೇತ್ರಗಳಿಗೆ ಭೇಟಿ ನೀಡಿ ನಿಖರವಾದ ಸಮೀಕ್ಷೆ ಕೈಗೊಂಡು 3 ದಿನಗೊಳಗಾಗಿ ಜಂಟಿ ಸಮೀಕ್ಷೆ ನಡೆಸಿ ವರದಿಯನ್ನು ನೀಡಬೇಕು ಎಂದು ಸೂಚಿಸಿದರು.

ಇತ್ತೀಚಿನ ದಿನಗಳಲ್ಲಿ ಬಿದ್ದ ಮಳೆ, ಗಾಳಿ ಹಾಗೂ ಆಲಿಕಲ್ಲು ಮಳೆಯಿಂದಾಗಿ ಕೃಷಿ ಬೆಳೆ ಹಾನಿಗೊಳಗಾದ ರೈತರು ಬೆಳೆ ವಿಮೆ ಮಾಡಿಸಿದ್ದರೆ ಅಂತಹ ರೈತರು ಮುಂದಿನ 3 ದಿನಗೊಳಗಾಗಿ (ಮುಂದಿನ 72 ಗಂಟೆಗೂಳಗಾಗಿ) ಓರಿಯಂಟಲ್ ಜನರಲ್ ಇನ್ಸೂ ರನ್ಸ್ ಕಂಪನಿ ಖಿಟಟ ಈಡಿ ಓಡಿ 1800 425 6678 ಗೆ ಕರೆ ಮಾಡಿ ವೈಯಕ್ತಿಕ ಸ್ಥಳ ನಿರ್ದಿಷ್ಟ ವಿಕೋಪಗಳ (ಐಐಂ) ಕುರಿತು ದೂರು ದಾಖಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

2025-26 ನೇ ಸಾಲಿನ ಖಿಃಅ ಯೋಜನೆಯಡಿ ದ್ರಾಕ್ಷಿ, ದಾಳಿಂಬೆ ಹಾಗೂ ಲಿಂಬೆ ಬೆಳೆಗಳಿಗೆ ಆಲಿಕಲ್ಲು ಮಳೆಯಿಂದಾಗಿ ಬೆಳೆಹಾನಿ ಸಂಭವಿಸಿದ್ದಲ್ಲಿ, ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು ಹಾಗೂ ಮಾಹಿತಿಯನ್ನು 72 ಗಂಟೆಗಳೊಳಗಾಗಿ ಅಗ್ರಿಕಲ್ಚರ್ ಇನ್ಸು ರನ್ಸ್ ಕಂಪನಿ ಆಫ್ ಇಂಡಿಯಾ ಲಿ. ರವರಿಗೆ ಖಿಟಟ ಈಡಿ ಓಡಿ 1800 425 0505 ಗೆ ಕರೆ ಮಾಡಿ ರೈತರು ಮಾಹಿತಿ ನೀಡಬಹುದಾಗಿದೆ ಎಂದರು.

ವಿಮಾ ಕಂಪನಿಯ ಅಧಿಕಾರಿಗಳು ಹಾಗೂ ಎಲ್ಲಾ ಇಲಾಖಾ ಅಧಿಕಾರಿಗಳು 3 ದಿನಗಳೊಳಗಾಗಿ ಜಂಟಿ ಸಮೀಕ್ಷೆ ಕೈಗೊಂಡು ವರದಿ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಆಕ್ಸ್ ಫರ್ಡ್ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಉದ್ಘಾಟನೆ

ಸಿಂಧನೂರು,ಮಾ.25-

ಸಿಂಧನೂರು ತಾಲೂಕಿನ ಸುಕ್ಷೇತ್ರ ಯದ್ದಲದೊಡ್ಡಿ ಗ್ರಾಮ ದಲ್ಲಿ ಸೋಮವಾರದಂದು ಆಕ್ಸ್ ಫರ್ಡ್ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಘಟಕದ ವತಿಯಿಂದ ಆಯೋಜಿಸಲಾದ ಉದ್ಘಾಟನಾ ಸಮಾರಂಭವು ಯಶಸ್ವಿಯಾಗಿ ನೇರವೇರಿತು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ.ಮ.ನಿ.ಪ್ರ ಮಹಾಲಿಂಗ ಮಹಾಸ್ವಾಮಿಗಳು ಯದ್ದಲದೊಡ್ಡಿ ಹಾಗೂ ಶ್ರೀ.ಮ.ನಿ. ಪ್ರ.ಸಿದ್ದಬಸವ ಸ್ವಾಮಿಗಳು ಹಳೇಕೋಟೇ ಬಳಗಾನೂರು ವಹಿಸಿದ್ದರು. ಪೂಜ್ಯರು ''ಸೇವೆಯೇ ಧರ್ಮ ಎಂಬ ಮಹತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡು, ಸಮಾಜಮುಖಿ ಚಿಂತನೆಗೆ ದಾರಿ ತೋರಿಸುತ್ತಿರುವುದೇ ಎನ್ ಎಸ್ ಎಸ್ ಎಂದು ನುಡಿದರು. ಉದ್ಘಾಟಕರಾಗಿ .ಜಿ.ಎಸ್ ಬಿರಾದಾರ್ ಎನ್. ಎಸ್. ಎಸ್ ಕಾರ್ಯಕ್ರಮಾಧಿಕಾರಿಗಳು ಎನ್ ಎಸ್ ಎಸ್ ಕೋಶ ಆ.ಶ್ರೀ.ಮ.ವಾ.ರಾ.ವಿ.ರಾ ಹಾಗೂ ಅಧ್ಯಕ್ಷೀಯ ಸ್ಥಾನವನ್ನು ಎನ್.ಸತ್ಯನಾರಾಯಣ ಶ್ರೇಷ್ಠಿ ಅಧ್ಯಕ್ಷರು ಆ.ಸ.ಸಂ.ಸಿಂ. ಹಾಗೂ ಸದಸ್ಯರು ವಿದ್ಯಾವಿಷಯಕ ಪರಿಷತ್ ಆ.ಶ್ರೀ.ಮ.ವಾ.ವಿ.ವಿ.ರಾ ಇವರು ಅಧ್ಯಕ್ಷೀಯವಾಗಿ ಕೈ ಕೈ ಕೂಡಿ ಒಗ್ಗಟ್ಟಾಗಿದ್ದರೆ ಸಮಾಜ ಸುಧಾರಿರುತ್ತದೆ ಎಂದು ನುಡಿದರು. ಹಾಗೂ ಧ್ವಜಾರೋಹಣವನ್ನು ಅಂಬಿಕಾ ಭೀಮಣ್ಣ ಮಾಜಿ ಗ್ರಾಮಪಂಚಾಯಿತಿ ಅಧ್ಯಕ್ಷರು ಒಳಬಳ್ಳಾರಿ ಯದ್ದಲದೊಡ್ಡಿ ಇವರು ನೇರವೇರಿಸಿದರು.

ಮುಖ್ಯ ಅತಿಥಿಗಳಾಗಿ ಆರ್.ಸಿ. ಪಾಟೀಲ್ ಕಾರ್ಯದರ್ಶಿಗಳು ಪಾಟೀಲ್ ಶಿಕ್ಷಣ ಸಂಸ್ಥೆ ಸಿಂಧನೂರು. ಅನಿಲ್ ಕುಮಾರ ಸದಸ್ಯರು ವಿದ್ಯಾವಿಷಯಕ ಪರಿಷತ್ ಆ.ಶ್ರೀ. ಮ.ವಾ.ವಿ.ವಿ.ರಾ. ಪರಶುರಾಮ್ ಮಲ್ಲಾಪುರ ಅಧ್ಯಕ್ಷರು ನೊಬೆಲ್ ಪದವಿ ಮಹಾವಿದ್ಯಾಲಯ ಸಿಂಧನೂರು. ಸಂಜೀವ್ ಕುಮಾರ ಆಡಳಿತಾಧಿಕಾರಿಗಳು ಆ.ಸ.ಸಂ.ಸಿಂ. ಶ್ರೀಕಾಂತ್ ಬಿ.ಎಂ.ಪ್ರಾಚಾರ್ಯರು ಆ.ಪ.ವಿ.ಸಿಂ ಹಾಗೂ ಊರಿನ ಪ್ರಮುಖರಾದ ಅಂಬಿಕಾ ಭೀಮಣ್ಣ, ಕೆ ಗಂಗಣ್ಣ .ಎಂ.ಗಂಗಣ್ಣ ಮಾಜಿ ಗ್ರಾಮ ಪಂ.ಸದಸ್ಯರು ,ಎಂ.ಹನುಮಪ್ಪ ಹಿರಿಯ ಮುಖಂಡರು ಸಾಯದ್ದಲದೊಡ್ಡಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತಾಡಿದ ಅನಿಲ್ ಕುಮಾರ್ ಸರ್ ''ನೀವು ಮಾಡಿದ ,ಎನ್ ಎಸ್ ಎಸ್. ನಲ್ಲಿನ ಸೇವೇಯೂ ನಿಮಗೆ ಜೀವನಕ್ಕೆ ಬೇಕಾದ ಎಲ್ಲವನ್ನು ಕಲಿಸುತ್ತದೆ. ಈ ಏಳು ದಿನದ ಸೇವೆ ನಿಮ್ಮ ಜೀವಿತಾವದಿಯಲ್ಲಿಯೂ ಸದಾ ಈ ಸೇವೆಯ ನೆನಪು ನಿಮ್ಮ ಹೃದಯದಲ್ಲಿ ಸದಾ ಜೀವಂತವಾಗಿರುತ್ತದೆ ಎಂದು ತಿಳಿಸಿದರು. ಪರಶುರಾಮ ಮಲ್ಲಾಪುರ ಸೇವೆಯ ಮೂಲಕ ಗ್ರಾಮಗಳ ಅಭಿವೃದ್ಧಿ ಸಾಧ್ಯವೆಂದು ಮಾತಾಡಿದರು.

ಪ್ರಾಸ್ತಾವಿಕವಾಗಿ ನಾಗೇಶ್ ಎನ್ ಎಸ್ ಎಸ್ ಸಂಯೋಜ ನಾಧಿಕಾರಿಗಳು ಮಾತಾಡಿದರು. ರಾಘವೇಂದ್ರ, ಗೋರೆಬಾಳ ನಿರೂಪಿಸಿದರು ಶ್ರೀಕಾಂತ್ ಬಿ.ಎಂ ವಂದಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಇರಾನ್ ಯುದ್ಧವನ್ನು ಟ್ರಂಪ್ ಸುಲಭವಾಗಿ ನಿಲ್ಲಿಸಲು ಸಾಧ್ಯವಿಲ್ಲ; ಯಾಕೆ ಗೊತ್ತೇ?

ಮಾರ್ಚ್ 23 ರಂದು, ಅಮೆರಿಕದ ಮಾರುಕಟ್ಟೆಗಳು ತೆರೆಯುವ ಹೊತ್ತಿಗೆ ಇರಾನ್‌ಗೆ ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಲು ನೀಡಿದ್ದ 48 ಗಂಟೆಗಳ ಗಡುವು ಮುಗಿಯುವ ಹಂತದಲ್ಲಿತ್ತು. ಅದೇ ಸಮದಯಲ್ಲಿ ಟ್ರಂಪ್ ಮತ್ತೊಂದು ಅಚ್ಚರಿಯ ಹೇಳಿಕೆ ಘೋಷಿಸಿದರು. ಮುಂದಿನ ಐದು ದಿನಗಳ ಕಾಲ ಇರಾನ್‌ನ ಇಂಧನ ಮತ್ತು ಪರಮಾಣು ಮೂಲಸೌಕರ್ಯಗಳ ಮೇಲೆ ದಾಳಿ ನಡೆಸದಂತೆ ತಮ್ಮ ಮಿಲಿಟರಿ ಅಧಿಕಾರಿಗಳಿಗೆ ಸೂಚಿಸಿದರು.

ಈ ಘೋಷಣೆಗೆ ಮಾರುಕಟ್ಟೆಗಳು ಸಕಾರಾತ್ಮಕವಾಗಿ ಸ್ಪಂದಿಸಿದರೂ ಟ್ರಂಪ್ ಉದ್ದೇಶವನ್ನು , ಇರಾನ್ ಮಾತ್ರ ಒಪ್ಪುವಂತೆ ಕಾಣುತ್ತಿಲ್ಲ. ಅಮೆರಿಕದೊಂದಿಗೆ ನಾವು ಯಾವುದೇ ನೇರ ಅಥವಾ ಪರೋಕ್ಷ ಮಾತುಕತೆ ನಡೆಸುತ್ತಿಲ್ಲ ಎಂದು ಇರಾನ್ ಸ್ಪಷ್ಟಪಡಿಸಿದೆ. ಇಸ್ರೇಲ್ ಕೂಡ ಟ್ರಂಪ್ ಅವರ ಈ ನಿರ್ಧಾರಕ್ಕೆ ಸಾಥ್ ನೀಡಿಲ್ಲ. ತನ್ನ ಹಿತಾಸಕ್ತಿಗಳನ್ನು ರಕ್ಷಿಸುವ ಗುರಿಗಳನ್ನೇ ಇಸ್ರೇಲ್ ಮುಂದುವರಿಸಲಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇರಾನ್ ಮತ್ತು ಇಸ್ರೇಲ್ ರಾತ್ರಿಯಿಡೀ ಪರಸ್ಪರ ಕ್ಷಿಪಣಿ ದಾಳಿಗಳನ್ನು ಮುಂದುವರಿಸಿವೆ.

ಈ ಬೆಳವಣಿಗೆಯ ಬೆನ್ನಲ್ಲೇ, ಯುದ್ಧದಿಂದ ಹೊರಬರಲು ಯಾವುದಾದರೂ ದಾರಿ ಇರಬಹುದೇ ಎಂಬ ಚರ್ಚೆ ಅಮೆರಿಕದಲ್ಲಿ ಶುರುವಾಗಿದೆ. ಇರಾನ್ ಮೇಲಿನ ಯುದ್ಧ ಈಗ ನಾಲ್ಕನೇ ವಾರಕ್ಕೆ ಕಾಲಿಟ್ಟಿದೆ. ಅಮೆರಿಕ ಏಕಪಕ್ಷೀಯವಾಗಿ ವಿರಾಮ ಘೋಷಿಸಿದ್ದರೂ, ಯುದ್ಧ ನಿಲ್ಲುವ ಅಥವಾ ಕದನ ವಿರಾಮದ ಯಾವುದೇ ಲಕ್ಷಣಗಳಿಲ್ಲ.

ಯುದ್ಧದ ಗುರಿಗಳನ್ನು ಸಂಪೂರ್ಣವಾಗಿ ಸಾಧಿಸಲಾಗಿದೆ, ಇರಾನ್ ಧ್ವಂಸವಾಗಿದೆ ಹಾಗೂ ಇರಾನಿನ ಸಶಸ್ತ್ರ ಪಡೆಗಳನ್ನು 100% ನಾಶಪಡಿಸಲಾಗಿದೆ ಎಂದು ಅಧ್ಯಕ್ಷ ಟ್ರಂಪ್ ಪದೇ ಪದೇ ಬಡಾಯಿ ಕೊಚ್ಚಿಕೊಳ್ಳುತ್ತಿದ್ದಾರೆ. ಅಷ್ಟೇ ಅಲ್ಲದೆ, ಅಮೆರಿಕ ಈ ಪ್ರದೇಶದಲ್ಲಿ ತನ್ನ ಕಾರ್ಯಾಚರಣೆಯನ್ನು ಮುಕ್ತಾಯಗೊಳಿಸುವ ಬಗ್ಗೆ ಚಿಂತಿಸುತ್ತಿದೆ ಎಂದೂ ಹೇಳಿದ್ದಾರೆ. ಆದರೂ, ಯುದ್ಧ ಮಾತ್ರ ನಿರಂತರವಾಗಿ ಸಾಗುತ್ತಿದೆ. ವಾಸ್ತವವಾಗಿ, ಪ್ರತಿ ದಿನವೂ ಸಂಘರ್ಷದ ವ್ಯಾಪ್ತಿ ವಿಸ್ತರಿಸುತ್ತಿದೆ. ಈ ಸಂಘರ್ಷವು ಕೇವಲ ಈ ಪ್ರದೇಶಕ್ಕೆ ಮಾತ್ರವಲ್ಲದೆ ಇಡೀ ಜಾಗತಿಕ ಸಮುದಾಯಕ್ಕೆ ನೀಡುತ್ತಿರುವ ಬೆದರಿಕೆ ಹೆಚ್ಚು ಗಂಭೀರವಾಗುತ್ತಿದೆ.

ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ಇರಾನ್ ಮೇಲೆ ದಾಳಿ ಪ್ರಾರಂಭಿಸಿದಾಗ, ಮೂಲಭೂತವಾಗಿ ಮೂರು ಘೋಷಿತ ಉದ್ದೇಶಗಳಿದ್ದವು:

ಇರಾನ್ ನಾಯಕತ್ವ, ಅದರ ಮಿಲಿಟರಿ, ಮೂಲಸೌಕರ್ಯ ಹಾಗೂ ಆರ್ಥಿಕತೆಯ ಮೇಲೆ ಇರಾನ್ ಮರಳಿ ಹೋರಾಡಲು ಸಾಧ್ಯವಾಗದ ಮಟ್ಟಿಗೆ ಭೀಕರ ದಾಳಿ ನಡೆಸುವುದು. ಇದರ ಪರಿಣಾಮವಾಗಿ, ಅಲ್ಲಿನ ಆಡಳಿತವು ಮಂಡಿಯೂರಬೇಕು ಅಥವಾ ಅಲ್ಲಿನ ಜನರೇ ಬೀದಿಗೆ ಬಂದು ಆಡಳಿತವನ್ನು ಕಿತ್ತೊಗೆಯಬೇಕು ಎಂಬುದು ಮೊದಲ ಗುರಿ.

ಇಸ್ರೇಲ್‌ನ ಅಸ್ತಿತ್ವಕ್ಕೆ ಬೆದರಿಕೆಯೆಂದು ಪರಿಗಣಿಸಲಾದ ಇರಾನ್‌ನ ಬ್ಯಾಲಿಸ್ಟಿಕ್ ಕ್ಷಿಪಣಿ ಕಾರ್ಯಕ್ರಮವನ್ನು ಧ್ವಂಸಗೊಳಿಸುವುದು.

ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ತಯಾರಿಸಲು ಸಾಧ್ಯವಾಗದಂತೆ ಅದರ ಪರಮಾಣು ಕಾರ್ಯಕ್ರಮವನ್ನು ಸಂಪೂರ್ಣವಾಗಿ ನಾಶಪಡಿಸುವುದು.

ಈ ಉದ್ದೇಶಗಳೊಂದಿಗೆ ಇರಾನ್ ಮೇಲೆ ಇಸ್ರೇಲ್- ಅಮೆರಿಕ ಮಾರಕ ದಾಳಿ ನಡೆಸಿದವು. ಮೊದಲ ದಿನವೇ ಇರಾನ್‌ನ ಸರ್ವೋಚ್ಚ ನಾಯಕ ಅಲಿ ಖಮೇನಿ ಅವರನ್ನು ಹತ್ಯೆಗೈದವು. ನಂತರ, ನಡೆದ ಸರಣಿ ಹತ್ಯೆಗಳಲ್ಲಿ ಮಿಲಿಟರಿ ಕಮಾಂಡರ್‌ಗಳು ಸೇರಿದಂತೆ 40ಕ್ಕೂ ಹೆಚ್ಚು ಉನ್ನತ ಅಧಿಕಾರಿಗಳನ್ನು ಅಮೆರಿಕ-ಇಸ್ರೇಲ್ ಕೊಂದವು. ಇರಾನ್‌ನ ಕ್ಷಿಪಣಿ ಸಾಮರ್ಥ್ಯವನ್ನು ಕುಂದಿಸಲು ಶಸ್ತ್ರಾಸ್ತ್ರ ಡಿಪೋಗಳು ಮತ್ತು ಕ್ಷಿಪಣಿ ಲಾಂಚರ್‌ಗಳನ್ನು ನಾಶಪಡಿಸಲಾಯಿತು. ಬಳಿಕ, ಇರಾನ್ ಅನ್ನು ಆರ್ಥಿಕವಾಗಿ ಕುಂದಿಸಲು ಗ್ಯಾಸ್ ಫೀಲ್ಡ್ ಮತ್ತು ತೈಲ ಡಿಪೋಗಳ ಮೇಲೆ ದಾಳಿ ಮಾಡಲಾಯಿತು.

ಅಮೆರಿಕದ ಲೆಕ್ಕಾಚಾರದ ಪ್ರಕಾರ, ಕಾರ್ಯಾಚರಣೆಯು ಒಂದೆರಡು ದಿನಗಳಲ್ಲಿ ಮುಗಿಯಬೇಕಿತ್ತು. ಆದರೆ, ಅಮೆರಿಕದ ಅಂದಾಜುಗಳು ಸಂಪೂರ್ಣವಾಗಿ ತಪ್ಪಾಯಿತು. ಯಾಕೆಂದರೆ, ಇರಾನ್ ಪ್ರಬಲವಾಗಿ ಪ್ರತಿಕ್ರಿಯಿಸಿತು. ಇರಾನ್ ಇಂದಿಗೂ ಗಟ್ಟಿಯಾಗಿ ನಿಂತು ಕಠಿಣ ಹೋರಾಟ ನೀಡುತ್ತಿದೆ. ಪ್ರತಿ ಹೊಸ ಸಂಘರ್ಷದ ನಂತರವೂ ಇರಾನ್ ಹೆಚ್ಚು ಬಲವಾಗಿ ಪ್ರತಿದಾಳಿ ಮಾಡುತ್ತಿದೆ. ಇದು ಅಮೆರಿಕವು ಯುದ್ಧದಿಂದ ಬೇಗನೆ ಹೊರಬರುವುದನ್ನು ಕಷ್ಟಕರವಾಗಿಸಿದೆ.

ಇನ್ನು, ಜಾಗತಿಕ ಇಂಧನ ಪೂರೈಕೆಯ ಜೀವಾಳವಾಗಿರುವ ಹಾರ್ಮುಜ್ ಜಲಸಂಧಿಯನ್ನು ಇರಾನ್ ಮುಚ್ಚಿರುವುದು ಈ ಯುದ್ಧದ ಅತಿದೊಡ್ಡ ತಿರುವು. ಜಲಸಂಧಿ ಮುಚ್ಚುವ ಇರಾನ್ ಘೋಷಣೆ ಮತ್ತು ಕೆಲವು ತೈಲ ಟ್ಯಾಂಕರ್‌ಗಳ ಮೇಲೆ ನಡೆಸಿದ ದಾಳಿಗಳು ಹಡಗು ಕಂಪನಿಗಳು ಮತ್ತು ಇನ್ಶೂರೆನ್ಸ್ ಸಂಸ್ಥೆಗಳನ್ನು ಬೆಚ್ಚಿಬೀಳಿಸಿವೆ. ಯಾರೂ ರಿಸ್ಕ್ ತೆಗೆದುಕೊಳ್ಳಲು ಸಿದ್ಧರಿಲ್ಲದ ಕಾರಣ ಹಡಗುಗಳ ಸಂಚಾರ ಸ್ಥಗಿತಗೊಂಡಿದೆ. ಭಾರತ ಮತ್ತು ಚೀನಾದಂತಹ ದೇಶಗಳು ತಮ್ಮ ಟ್ಯಾಂಕರ್‌ಗಳಿಗೆ ಷರತ್ತುಬದ್ಧ ಹಾದಿಯನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದರೂ, ಜಾಗತಿಕ ಸಂಚಾರಕ್ಕೆ ಈ ಮಾರ್ಗ ಇನ್ನೂ ಮುಚ್ಚಲ್ಪಟ್ಟಿದೆ. ಈ ಸಮಸ್ಯೆ ಬಗೆಹರಿಯದೆ ಅಮೆರಿಕಕ್ಕೆ ತನ್ನ ಕಾರ್ಯಾಚರಣೆಯನ್ನು ಹಿಂತೆಗೆದುಕೊಳ್ಳುವುದು ಮಿಲಿಟರಿ ಮತ್ತು ರಾಜತಾಂತ್ರಿಕವಾಗಿ ಅಸಾಧ್ಯ.

ಹಾರ್ಮುಜ್ ಜಲಸಂಧಿಯನ್ನು ತೆರೆಯುವುದು ಯುದ್ಧ ಅಂತ್ಯಗೊಳಿಸಲು ಅನಿವಾರ್ಯ ಎಂಬುದನ್ನು ಅರಿತ ಟ್ರಂಪ್, ಮಾರ್ಚ್ 21 ರಂದು ಇರಾನ್‌ಗೆ ಎಚ್ಚರಿಕೆ ನೀಡಿದ್ದರು: ''ಮಾರ್ಚ್ 23 ರೊಳಗೆ ಜಲಸಂಧಿ ಮುಕ್ತವಾಗದಿದ್ದರೆ, ಇರಾನ್‌ನ ಇಂಧನ ಮತ್ತು ವಿದ್ಯುತ್ ಗ್ರಿಡ್‌ಗಳನ್ನು ಅಮೆರಿಕ-ಇಸ್ರೇಲ್ ಮೈತ್ರಿಕೂಟ ನಾಶಪಡಿಸುತ್ತದೆ'' ಎಂದು ಬೆದರಿಕೆ ಹಾಕಿದರು.

ಇದಕ್ಕೆ ಇರಾನ್ ಅಷ್ಟೇ ಕಠಿಣವಾಗಿ ಪ್ರತಿಕ್ರಿಯಿಸಿದೆ; ನಮ್ಮ ವಿದ್ಯುತ್ ಗ್ರಿಡ್ ಮೇಲೆ ದಾಳಿಯಾದರೆ, ಇಡೀ ಪ್ರದೇಶದ ವಿದ್ಯುತ್ ಮತ್ತು ಸಮುದ್ರದ ನೀರನ್ನು ಶುದ್ಧೀಕರಿಸುವ ಘಟಕಗಳ ಮೇಲೆ ದಾಳಿ ಮಾಡುವುದಾಗಿ ಬೆದರಿಕೆ ಹಾಕಿದೆ. ಗಲ್ಫ್ ರಾಷ್ಟ್ರಗಳು ಕುಡಿಯುವ ನೀರಿಗಾಗಿ ಸಂಪೂರ್ಣವಾಗಿ ಈ ಘಟಕಗಳ ಮೇಲೆ ಅವಲಂಬಿತವಾಗಿರುವುದರಿಂದ, ಇರಾನ್‌ನ ಈ ಬೆದರಿಕೆಯಿಂದ ಕೊಲ್ಲಿ ರಾಷ್ಟ್ರಗಳಿಗೆ ದೊಡ್ಡ ಮಾನವೀಯ ಬಿಕ್ಕಟ್ಟು ಉಂಟಾಗಬಹುದು. ಬಹುಶಃ ಇದೇ ಕಾರಣಕ್ಕೆ ಟ್ರಂಪ್ ಈ ಬೆದರಿಕೆಯ ಸಾಧಕ-ಬಾಧಕಗಳನ್ನು ಮರುಪರಿಶೀಲಿಸಲು ಐದು ದಿನಗಳ ವಿರಾಮ ಘೋಷಿಸಿದ್ದಾರೆ.

ಗಮನಾರ್ಹವಾಗಿ, ಯುದ್ಧದ ಆರಂಭಿಕ ಹಂತದಲ್ಲಿ ಪರಮಾಣು ತಾಣಗಳ ಮೇಲೆ ಬಾಂಬ್ ದಾಳಿ ನಡೆಸಲಾಗಿದ್ದರೂ, ಈಗ ಇರಾನ್ ತನ್ನ ಪರಮಾಣು ಸ್ಥಾವರಗಳ ಮೇಲೆ ಯಾವುದೇ ಏಕಪಕ್ಷೀಯ ದಾಳಿಯನ್ನು ಸಹಿಸುವ ಸ್ಥಿತಿಯಲ್ಲಿಲ್ಲ. ಮಾರ್ಚ್ 20ರಂದು ಅಮೆರಿಕವು ನಟಾಂಜ್ ಪರಮಾಣು ಸ್ಥಾವರದ ಮೇಲೆ ದಾಳಿ ಮಾಡಿದ ಬಳಿಕ, ಇರಾನ್ ಅಸಾಧ್ಯವಾದುದನ್ನು ಮಾಡಿ ತೋರಿಸಿತು. ಅದು ದಕ್ಷಿಣ ಇಸ್ರೇಲ್‌ನ ಡಿಮೋನಾ ನಗರದ ಮೇಲೆ ಯಶಸ್ವಿಯಾಗಿ ದಾಳಿ ನಡೆಸಿತು. ಅತ್ಯಂತ ರಹಸ್ಯವಾದ ಮತ್ತು ಭದ್ರತೆ ಹೊಂದಿರುವ ಇಸ್ರೇಲ್‌ನ ಪರಮಾಣು ಸಂಶೋಧನಾ ಕೇಂದ್ರದ ಮೇಲೆಯೇ ಇರಾನ್ ದಾಳಿ ನಡೆಸಿದ್ದು, ಅಮೆರಿಕವನ್ನು ಮತ್ತಷ್ಟು ಅಲುಗಾಡಿಸಿದೆ. ಇರಾನ್ ಕ್ಷಿಪಣಿಗಳು ಇಸ್ರೇಲ್‌ನ ಹಲವು ಪದರಗಳ ರಕ್ಷಣಾ ಕವಚವನ್ನು ಭೇದಿಸಿ ಡಿಮೋನಾವನ್ನು ತಲುಪಿರುವುದು ಸಂಘರ್ಷದ ತೀವ್ರತೆಯನ್ನು ಹೆಚ್ಚಿಸಿದೆ. ಇಸ್ರೇಲ್‌ನ ಪರಮಾಣು ಕೇಂದ್ರಕ್ಕೆ ಇರಾನ್ ನೇರವಾಗಿ ಹಾನಿ ಮಾಡದಿದ್ದರೂ, ಮುಂದಿನ ಹಂತದಲ್ಲಿ ಅದು ಸಂಭವಿಸಿದರೆ ವಿಕಿರಣ ಸೋರಿಕೆಯ ಅಪಾಯವಿದೆ.

ಅಮೆರಿಕದಿಂದ ಸಿಗುತ್ತಿರುವ ಮಾಹಿತಿ ಪ್ರಕಾರ, ಟ್ರಂಪ್ ಆದಷ್ಟು ಬೇಗ ಈ ಯುದ್ಧದಿಂದ ಹೊರಬರಲು ದಾರಿ ಹುಡುಕುತ್ತಿದ್ದಾರೆ. ಇಸ್ರೇಲ್‌ನ ಒತ್ತಾಯಕ್ಕೆ ಮಣಿದು ಯುದ್ಧಕ್ಕೆ ಇಳಿದ ಟ್ರಂಪ್, ಇಷ್ಟು ದೀರ್ಘಕಾಲದ ಸಂಘರ್ಷ ಮತ್ತು ಇರಾನ್‌ನಿಂದ ಇಂತಹ ಪ್ರಬಲ ಪ್ರತಿರೋಧವನ್ನು ನಿರೀಕ್ಷಿಸಿರಲಿಲ್ಲ. ಆದರೆ, 2025ರ ಜೂನ್‌ನಲ್ಲಿ ಬಿ-2 ಬಾಂಬರ್‌ಗಳ ಮೂಲಕ ಇರಾನ್ ಪರಮಾಣು ತಾಣಗಳ ಮೇಲೆ ದಾಳಿ ನಡೆಸಿ ಯುದ್ಧ ನಿಲ್ಲಿಸಿದಷ್ಟು ಸುಲಭ ಈ ಬಾರಿ ಇಲ್ಲ. ಇರಾನ್‌ನ ತೈಲ ಮತ್ತು ಅನಿಲ ರಫ್ತು ಸಾಮರ್ಥ್ಯವನ್ನು ನಿಯಂತ್ರಿಸಲು ಅದರ ಖಾರ್ಗ್ ದ್ವೀಪದಲ್ಲಿ ವಿಶೇಷ ಪಡೆಗಳನ್ನು ಇಳಿಸುವ ಯೋಜನೆಯನ್ನು ಅಮೆರಿಕ ಪರಿಶೀಲಿಸುತ್ತಿದೆ ಎನ್ನಲಾಗಿದೆ. ಇನ್ನು ಕೆಲವು ವರದಿಗಳ ಪ್ರಕಾರ, ಇರಾನ್ ಬಳಿ ಇರುವ 440 ಕೆಜಿ ಸಮೃದ್ಧ ಯುರೇನಿಯಂ ಅನ್ನು ವಶಪಡಿಸಿಕೊಳ್ಳಲು 3,000 ದಿಂದ 5,000 ಮರೀನ್ ಸೈನಿಕರನ್ನು ಭೂಸೇನಾ ಕಾರ್ಯಾಚರಣೆಗೆ ಸಜ್ಜುಗೊಳಿಸಲಾಗುತ್ತಿದೆ.

ಯುದ್ಧದ ಅಂತ್ಯಕ್ಕೆ ಇನ್ನೊಂದು ದೊಡ್ಡ ಅಡ್ಡಿಯೆಂದರೆ ಇಸ್ರೇಲ್. ಇಸ್ರೇಲ್ ಪಾಲಿಗೆ ಇರಾನ್‌ನಲ್ಲಿ ಆಡಳಿತ ಬದಲಾವಣೆಯಾಗದ ಹೊರತು ಯುದ್ಧ ಮುಗಿಯುವುದಿಲ್ಲ. ಈಗ ಮೊಜ್ತಬಾ ಖಮೇನಿ ಸರ್ವೋಚ್ಚ ನಾಯಕರಾಗಿರುವುದು ಇಸ್ರೇಲ್‌ಗೆ ಹಳೆಯ ನಾಯಕನಿಗಿಂತಲೂ ದೊಡ್ಡ ತಲೆನೋವಾಗಿದೆ.

ಇರಾನ್ ಪಾಲಿಗೆ ಇದು ಕೇವಲ ಸಾವು-ನೋವಿನ ಯುದ್ಧವಲ್ಲ. ತನ್ನ ಸರ್ವೋಚ್ಚ ನಾಯಕ ಮತ್ತು ಉನ್ನತ ನಾಯಕತ್ವವನ್ನು ಕಳೆದುಕೊಂಡಿರುವ ಇರಾನ್ ಈಗ ಅಂತಿಮ ಹೋರಾಟಕ್ಕೆ ನಿಂತಿದೆ. ಅಮೆರಿಕದ ಟೋಮಹಾಕ್ ಕ್ಷಿಪಣಿ ದಾಳಿಯಿಂದ ಟೆಹ್ರಾನ್‌ನ ಶಾಲೆಯೊಂದರಲ್ಲಿ 160ಕ್ಕೂ ಹೆಚ್ಚು ಬಾಲಕಿಯರು ಸಾವನ್ನಪ್ಪಿರುವುದು ಇರಾನ್‌ನ ಆಕ್ರೋಶಕ್ಕೆ ಕಾರಣವಾಗಿದೆ. ಈಗ ಇರಾನ್ ತನ್ನ ಘನತೆಯನ್ನು ಮರಳಿ ಪಡೆಯಲು ಬಯಸುತ್ತಿದೆ. ಪರಮಾಣು ಶಕ್ತಿ ಪಡೆಯುವ ತನ್ನ ಹಕ್ಕನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಬೇಕು, ಆರ್ಥಿಕ ನಿರ್ಬಂಧಗಳನ್ನು ತೆಗೆದುಹಾಕಬೇಕು ಹಾಗೂ ಅಮೆರಿಕ-ಇಸ್ರೇಲ್ ಇನ್ನು ಮುಂದೆ ತಮ್ಮ ಮೇಲೆ ದಾಳಿ ಮಾಡುವುದಿಲ್ಲ ಎಂಬ ಬಲವಾದ ಭರವಸೆ ನೀಡಬೇಕೆಂದು ಇರಾನ್ ನಿರೀಕ್ಷಿಸುತ್ತಿದೆ.

ಅದಕ್ಕಾಗಿ, ಯುದ್ಧವನ್ನು ಮುಂದುವರೆಸಿದೆ. ಯುದ್ಧದ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಕುಡಿಯುವ ನೀರಿನ ಘಟಕಗಳ ಮೇಲಿನ ಬೆದರಿಕೆ, ಹಾರ್ಮುಜ್ ಜಲಸಂಧಿ ಮುಚ್ಚಿರುವುದು ಇಡೀ ಜಗತ್ತಿನ ಮೇಲೆ ಆರ್ಥಿಕ ಹೊರೆ ಹೇರುತ್ತಿದೆ. ಟ್ರಂಪ್ ತನಗೊಂದು ಸಣ್ಣ ಮಟ್ಟದ ಜಯ ಸಿಕ್ಕಿದೆ ಎಂದು ಬಿಂಬಿಸಿಕೊಂಡು ಯುದ್ಧದಿಂದ ಹೊರಬರಲು ಯತ್ನಿಸುತ್ತಿದ್ದಾರೆ. ಒಂದು ವೇಳೆ ಅಮೆರಿಕ ಹಿಂದೆ ಸರಿದರೆ, ಈಗಿನ ಪರಿಸ್ಥಿತಿಯಲ್ಲಿ ಇಸ್ರೇಲ್ ಒಬ್ಬಂಟಿಯಾಗಿ ಯುದ್ಧ ಮುಂದುವರಿಸಲು ಸಾಧ್ಯವಿಲ್ಲ. ಇತರ ರಾಷ್ಟ್ರಗಳು ತಮ್ಮೊಂದಿಗೆ ಸೇರಬೇಕೆಂದು ಇಸ್ರೇಲ್ ಬಯಸುತ್ತಿದೆ. ಇನ್ನೊಂದೆಡೆ ಇರಾನ್ ಅತ್ಯಂತ ಎಚ್ಚರಿಕೆಯಿಂದಿದ್ದು, ಯಾವುದೇ ಹೊಸ ಬೆದರಿಕೆಗೆ ಉತ್ತರಿಸಲು ಸಿದ್ಧವಾಗಿದೆ. ತಮ್ಮ ಬೇಡಿಕೆಗಳಿಗೆ ಅಮೆರಿಕ ಮಣಿಯುವವರೆಗೂ ಯುದ್ಧ ಮುಗಿಯುವುದಿಲ್ಲವೆಂದು ಸ್ಪಷ್ಟವಾಗಿ ಹೇಳುತ್ತಿದೆ.


ಮಹಿಳಾ ಮೀಸಲಾತಿ ಮಸೂದೆ ಮಂಡನೆಗೆ ತರಾತುರಿ ಕ್ಷೇತ್ರಗಳ ಮರುವಿಂಗಡನೆ ಸಂದರ್ಭದಲ್ಲೇ ಜಾರಿ?

ರಾಜಕೀಯದಲ್ಲಿ ಮಹಿಳಾ ಮೀಸಲಾತಿ ವಿಚಾರ ಮತ್ತೆ ಮೇಲ್ಪಂಕ್ತಿಗೆ ಬಂದಿದೆ. ಸದ್ಯ ನಡೆಯುತ್ತಿರುವ ಬಜೆಟ್ ಅಧಿವೇಶನದಲ್ಲೇ, ಲೋಕಸಭೆಯಲ್ಲಿ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ನೀಡುವುದಕ್ಕಾಗಿ ಎರಡು ಮಸೂದೆಗಳನ್ನು ಮಂಡಿಸಲಿದೆ. ಮಹಿಳಾ ಮೀಸಲಾತಿ ಜಾರಿಯನ್ನು ಲೋಕಸಭೆ ಮತ್ತು ವಿಧಾನಸಭಾ ಕ್ಷೇತ್ರಗಳ ಮರುವಿಂಗಡಣೆಯ ಸಂದರ್ಭದಲ್ಲೇ ಮಾಡುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ ಎಂದು ಕೂಡ ಹೇಳಲಾಗುತ್ತಿದೆ.

ನಾರಿ ಶಕ್ತಿ ವಂದನಾ ಅಧಿನಿಯಮಕ್ಕೆ (ಮಹಿಳಾ ಮೀಸಲಾತಿ ಕಾಯ್ದೆ) ತಿದ್ದುಪಡಿ ತರಲು ಸಂವಿಧಾನ ತಿದ್ದುಪಡಿ ಮಾಡುವ ಮಸೂದೆ, ಕ್ಷೇತ್ರ ಮರುವಿಂಗಡಣೆ ಕಾಯ್ದೆಯನ್ನು ತಿದ್ದುಪಡಿ ಮಾಡುವ ಮಸೂದೆಯನ್ನು ಈ ಅಧಿವೇಶನದಲ್ಲೇ ಕೇಂದ್ರ ಸಂಸತ್‌ನಲ್ಲಿ ಮಂಡಿಸುವುದಕ್ಕೆ ಮುಂದಾಗಿದೆ. ಬಜೆಟ್ ಅಧಿವೇಶನದಲ್ಲಿ ಸಾಧ್ಯವಾಗದಿದ್ದಲ್ಲಿ ಅದಕ್ಕಾಗಿಯೇ ವಿಶೇಷ ಅಧಿವೇಶನ ಕರೆಯುವ ಸಾಧ್ಯತೆ ಇದೆ ಎಂದು ಕೂಡ ವರದಿಗಳಿವೆ.

ಸಂವಿಧಾನಕ್ಕೆ 106ನೇ ತಿದ್ದುಪಡಿ ತಂದು ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿ ನೀಡುವ ಮಸೂದೆಯನ್ನು 2023ರಲ್ಲಿ ಸಂಸತ್ತು ಮೂರನೇ ಎರಡು ಬಹುಮತದೊಂದಿಗೆ ಅಂಗೀಕರಿಸಿತ್ತು. ರಾಷ್ಟ್ರಪತಿ ದೌಪದಿ ಮುರ್ಮು ಅವರು ಮಸೂದೆಗೆ ಅಂಕಿತ ಹಾಕಿದ್ದರು. 2027ರಲ್ಲಿ ನಡೆಯಲಿರುವ ಜನಗಣತಿ ಆಧಾರದಲ್ಲಿ ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಮರುವಿಂಗಡಣೆ ನಡೆಸಲಾಗುವುದು ಎಂದು ಕೇಂದ್ರ ಸರ್ಕಾರ ಹೇಳಿತ್ತು. ಆದರೆ ಈಗ 2011ರ ಜನಗಣತಿ ಆಧಾರದಲ್ಲೇ ಮೀಸಲಾತಿ ನೀಡುವ ನಿರ್ಧಾರಕ್ಕೆ ಕೇಂದ್ರ ಮುಂದಾಗಿದೆಯೇ ಎನ್ನುವ ಪ್ರಶ್ನೆಯೂ ಉದ್ಭವವಾಗಿದೆ. ಇದೇ ಹಿನ್ನೆಲೆಯಲ್ಲಿ ವಿಪೊಕ್ಷಗಳು ಕೇಂದ್ರ ಸರ್ಕಾರಕ್ಕೆ ಸರ್ವಪಕ್ಷಗಳ ಸಭೆಯನ್ನು ಕರೆಯಬೇಕು ಎಂದು ಆಗ್ರಹಿಸಿವೆ.

ಜನಸಂಖ್ಯೆಯನ್ನು ಆಧರಿಸಿ ಲೋಕಸಭೆ ಮತ್ತು ವಿಧಾನಭೆಗಳಲ್ಲಿ ಈ ಹಿಂದಿನ ಕ್ಷೇತ್ರ ಮರುವಿಂಗಡಣೆಯ ಸಂದರ್ಭದಲ್ಲಿ ಎಸ್‌ಸಿ, ಎಸ್‌ಟಿ ಮೀಸಲಾತಿ ಕಲ್ಪಿಸಲಾಗಿತ್ತು. ಈಗ ಮಹಿಳಾ ಮೀಸಲು ಕ್ಷೇತ್ರಗಳನ್ನು ಗುರುತಿಸುವುದಕ್ಕೂ ಇದೇ ಮಾದರಿಯನ್ನು ಬಳಸುವ ಸಾಧ್ಯತೆ ಇದೆ ಎಂಬ ವರದಿಗಳಿವೆ. ಮಹಿಳಾ ಮೀಸಲು ಕ್ಷೇತ್ರಗಳಲ್ಲಿ ಎಸ್‌ಸಿ, ಎಸ್‌ಟಿ ಮೀಸಲಾತಿಯೂ ಇರಲಿದೆ. ಆದರೆ, ಒಬಿಸಿ ಮೀಸಲಾತಿ ಇರುವುದಿಲ್ಲ ಎಂದು ಹೇಳಲಾಗುತ್ತಿದೆ. ಕ್ಷೇತ್ರಗಳ ಮರುವಿಂಗಡನೆಯಾದರೆ, ಲೋಕಸಭೆಯ 543 ಕ್ಷೇತ್ರಗಳು 816ಕ್ಕೆ ಏರಿಕೆಯಾಗಲಿವೆ. ಹೆಚ್ಚಳವಾದ 273 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಲಾಗುತ್ತದೆ.



ಸುದೀರ್ಘ ಇತಿಹಾಸ ಕಂಡ ಮಹಿಳಾ ಮೀಸಲಾತಿ ಹಾದಿ :

ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿಯನ್ನು ಲೋಕಸಭೆ ಮತ್ತು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭೆಗಳಲ್ಲಿ ನೀಡಬೇಕು ಎನ್ನುವ ಬೇಡಿಕೆ ಇಂದು ನಿನ್ನೆಯದಲ್ಲ. ಸ್ವಾತಂತ್ರ್ಯಪೂರ್ವದಲ್ಲೇ ರಾಜಕೀಯದಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಬೇಕು ಎನ್ನುವ ಚರ್ಚೆಗಳು ನಡೆದಿದ್ದವು. ಸ್ವಾತಂತ್ರ್ಯ ಹೋರಾಟಗಾರ್ತಿ ರೇಣುಕಾ ರೇ ಅವರಂತಹ ಅನೇಕ ಮಹಿಳಾ ಹೋರಾಟಗಾರ್ತಿಯರ ಶ್ರಮದಿಂದ ರಾಜಕೀಯದಲ್ಲಿ ಮಹಿಳೆಯರ ಸ್ಥಿತಿಗತಿ ಅಧ್ಯಯನ ಮಾಡುವುದಕ್ಕೆ ವಿಶೇಷ ಸಮಿತಿಯೂ ರಚನೆಯಾಯಿತು. 1974ರಲ್ಲಿ ಪಂಚಾಯತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಬೇಕೆಂದು ಶಿಫಾರಸ್ಸು ಮಾಡಿತ್ತು. ದಶಕಗಳವರೆಗೆ ಸಂವಿಧಾನ ತಿದ್ದುಪಡಿ, ಬೇಡಿಕೆ, ಮಹಿಳಾ ಮೀಸಲಾತಿ ಹೋರಾಟಗಳಲ್ಲೇ ಕಾಲ ಉರುಳಿತ್ತು.

★ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ನೇತೃತ್ವದ ಸರ್ಕಾರ 1996 ಸೆಪ್ಟೆಂಬರ್ 12ರಂದು, ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮೀಸಲಾತಿ ಕಲ್ಪಿಸುವ ಬಗ್ಗೆ ಮಸೂದೆ ಮಂಡಿಸಿತು. ಸರ್ಕಾರದ ಅಸ್ಥಿರತೆ ನಿರ್ಮಾಣವಾದ ಕಾರಣ, ಆ ಮಸೂದೆ ಬಿದ್ದು ಹೋಗಿದೆ.

★ ಅಟಲ್ ಬಿಹಾರಿ ವಾಜಪೇಯಿ ಅವರ ನೇತೃತ್ವದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರದಲ್ಲಿದ್ದಾಗ 1998ರಿಂದ 2003ರ ನಡುವೆ ಬಿಜೆಪಿ ನೇತೃತ್ವದ ಮೀಸಲಾತಿ ಮಸೂದೆಯನ್ನು ನಾಲ್ಕು ಬಾರಿ ಸಂಸತ್ತಿನಲ್ಲಿ ಮಂಡಿಸಿತ್ತು. ಆದರೆ, ಅಂಗೀಕಾರವಾಗಿರಲಿಲ್ಲ.

★ 2008ರಲ್ಲಿ ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಮೊದಲಿಗೆ ರಾಜ್ಯಸಭೆಯಲ್ಲಿ ಮಸೂದೆ ಮಂಡಿಸಿತ್ತು. ವರದಿ ಬಾರದೇ ಇದ್ದುದರಿಂದ ಮಸೂದೆ ಬಿದ್ದು ಹೋಯಿತು.

★ 2014, 2019ರ ಚುನಾವಣೆ ಸಂದರ್ಭದಲ್ಲಿ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸುವ ಭರವಸೆ ನೀಡಿದ್ದ ಬಿಜೆಪಿ ಈ ಬಗ್ಗೆ ನಿರ್ಧಾರ ಕೈಗೊಂಡಿರಲಿಲ್ಲ.

★ ಭಾರತೀಯ ಮಹಿಳೆಯರ ರಾಷ್ಟ್ರೀಯ ಒಕ್ಕೂಟ 2021ರಲ್ಲಿ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ ಮಾಡಿತ್ತು.

★ 2023ರ ಆಗಸ್ಟ್‌ನಲ್ಲಿ ನಡೆದ ವಿಶೇಷ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಎರಡೂ ಸದನಗಳಲ್ಲಿ ನಾರಿ ಶಕ್ತಿ ವಂದನಾ ಮಸೂದೆಯನ್ನು ಮಂಡಿಸಿ ಅಂಗೀಕಾರ ಪಡೆದಿತ್ತು.

ಎ ಐ ಟಿ ಯು ಸಿ ಹಾಗು ಸಿಪಿಐ ಪಕ್ಷದ ವತಿಯಿಂದ ಹುತಾತ್ಮರ ದಿನ 'ಬಲಿದಾನ್' ದಿವಸ್ ಆಚರಣೆ



ಹಟ್ಟಿ ಚಿನ್ನದ ಗಣಿ:

ದೇಶದ ಸ್ವತಂತ್ರಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿ ಹುತಾತ್ಮರಾದ ವೀರ ಭಗತ್ ಸಿಂಗ್ ರಾಜಗುರು ಸುಖದೇವ್ ಇವರನ್ನು ನೇಣುಗಂಬಕೇರಿಸಿದ ದಿ ಈದಿನವನ್ನು ಪ್ರಪಂಚದಾದ್ಯಂತ ಹುತಾತ್ಮರ ದಿನವನ್ನಾಗಿ ಆಚರಿಸಲಾಗುತ್ತದೆ. ಹಟ್ಟಿ ಚಿನ್ನದ ಗಣಿ ಎಐಟಿಯುಸಿ ಹಾಗೂ ಸಿಪಿಐ ಪಕ್ಷದ ವತಿಯಿಂದ ದಿ.ಕಾಂ ಅರವಿಂದ್ ಮಳೆಬೆನ್ನೂರು ಗ್ರಂಥಾಲಯ ಹಾಗೂ ಎಐಟಿಯುಸಿ ಕಚೇರಿಯ ಮುಂಭಾಗದಲ್ಲಿ ವೀರ ಭಗತ್ ಸಿಂಗ್,ರಾಜಗುರು, ಸುಖದೇವ,ರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮನ ಸಲ್ಲಿಸಲಾಯಿಸಲಾಯಿತು. ಭಗತ್ ಸಿಂಗ್ ಅವರ ಅತ್ಯಂತ ಪ್ರಸಿದ್ಧ ಘೋಷಣೆ 'ಇಂಕ್ವಿಲಾಬ್ ಜಿಂದಾಬಾದ್''(ಕ್ರಾಂತಿ ಚಿರಾಯುಗವಾಗಲಿ)ಎನ್ನುವ ಘೋಷಣೆ ಕೂಗುತ್ತಾ ಅವರ ಬಲಿದಾನದ ದಿನದಂದು ಅವರಿಗೆ ಶತಕೋಟಿ ಪ್ರಣಾಮಗಳನ್ನು ಸಲ್ಲಿಸಲಾಯಿತು.

ಈ ಕಾರ್ಯಕ್ರಮ ಉದ್ದೇಶಿಸಿ ಸಂಘಟನೆ ಗೌರವಾಧ್ಯಕ್ಷರಾದ ಕಾಮ್ರೆಡ್ ಜಿಎಸ್ ಹನುಮಂತ ಸುಣ್ಣದಕಲ್ ಮಾತನಾಡಿ ಭಾರತ ಸ್ವತಂತ್ರ ಚಳುವಳಿಯಲ್ಲಿ ದುಮಿಕಿ ಹೋರಾಟ ಮಾಡಿದ ಕ್ರಾಂತಿಕಾರಿ ವೀರಸೇನಾನಿಗಳಾದ ಭಗತ್ ಸಿಂಗ್ ರಾಜಗುರು ಸುಖದೇವ್ ಇವರು ಬ್ರಿಟಿಷರ ವಿರುದ್ಧ ಹೋರಾಟ ಮಾಡಿದ ನಗುನಗುತ್ತಾ ನೇಣುಗಂಬಕ್ಕೆ ಏರಿ ಹುತಾತ್ಮರ ಇವರಿಗೆ ನಮನ ಸಲ್ಲಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಐಟಿಯುಸಿ ಅಧ್ಯಕ್ಷರಾದ ನರಸಪ್ಪ ಬಾದರದಿನ್ನಿ, ಕಾರ್ಮಿಕ ಸಂಘದ ಉಪಾಧ್ಯಕ್ಷರಾದ ತಿಪ್ಪಣ್ಣ ಮಾಚನೂರು,ಶಂಕರಗೌಡ ಬಳಗಾನೂರ,ಎನ್ ಸ್ವಾಮಿ ನಾಯ್ಕೋಡಿ,ಶ್ರೀಮತಿ ಪಂಚಲಮ್ಮ,ಗಂಗಪ್ಪ ಶಾಕೋದಿ ,ರಂಗನಾಥ್,ಸಲಿಂ ಪಾಷ ನವೀನ್ ಕುಮಾರ್ ಶ್ರೀಕಾಂತ್ ನಾಯ್ಕೋಡಿ, ಅಮೀರ್ ಪಾಷಾ,ಶಿವರಾಜ್ ಮಾಸ್ಟರ್ ಕಿರಣ್ ಕುಮಾರ್ ನಾಗರಾಜ್,ಮೌನುದ್ದೀನ್ ಬೂದಿನಾಳ ಇನ್ನು ಅನೇಕ ಸಂಗಾತಿಗಳು ಉಪಸ್ಥಿತರಿದ್ದರು.

ರಾಷ್ಟ್ರೀಯ ಇಂಧನ ತುರ್ತು ಘೋಷಿಸಿದ ಫಿಲಿಫೈನ್ಸ್

ಫಿಲಿಫೈನ್ಸ್ ನಲ್ಲಿ ಇಂಧನ ತುರ್ತು ಘೋಷಣೆ. ಗಲ್ಫ್ ಸಂಘರ್ಷದಿಂದ ಸೃಷ್ಟಿಯಾಗಿರುವ ತೈಲ ಮತ್ತು ಅನಿಲ ಬಿಕ್ಕಟ್ಟು ಏಷ್ಯಾದ ರಾಷ್ಟ್ರಗಳನ್ನು ತೀವ್ರ ಸಂಕಷ್ಟಕ್ಕೆ ನೂಕಿವೆ. ಪರಿಣಾಮ ಫಿಲಿಫೈನ್ ಜಗತ್ತಿನ ಇಂಧನ ತುರ್ತು ಘೋಷಿಸಿದ ಮೊದಲ ರಾಷ್ಟ್ರವಾಗಿದೆ. ಸದ್ಯ ಲಭ್ಯವಿರುವ ಇಂಧನವನ್ನು ಕ್ರಮವಾಗಿ ಬಳಸಲು ಹಾಗೂ ಸಂರಕ್ಷಿಸಲು ಬೇಕಾದ ಕ್ರಮಗಳನ್ನು ಕೈಗೊಳ್ಳುವ ನಿರ್ಧಾರಕ್ಕೆ ಬಂದಿರುವುದಾಗಿ ಫಿಲಿಫೈನ್ ಅಧ್ಯಕ್ಷರಾದ ಫರ್ಡಿನಾಂಡ್ ಮಾರ್ಕ್ರೋಸ್ ಜೂನಿಯರ್ ಹೇಳಿಕೆ ನೀಡಿದ್ದಾರೆ.

ಅಮೆರಿಕ ,ಇಸ್ರೇಲ್ ಮತ್ತು ಇರಾನ್‌ನ ನಡುವಿನ ಸಂಘರ್ಷ ಹಾರ್ಮುಜ್ ಜಲಸಂಧಿಯ ಮೂಲಕ ತೈಲ ಹಡಗುಗಳಿಗೆ ನಿರ್ಬಂಧ ವಿಧಿಸಿತ್ತು. ಇದರಿಂದ ಫಿಲಿಫೈನ್ ನೇರ ದುಷ್ಪರಿಣಾಮಕ್ಕೆ ಒಳಗಾಗಿದ್ದು ಹೆಚ್ಚುತ್ತಿರುವ ಇಂಧನ ಬೆಲೆಗಳಿಂದ ಜಗತ್ತು ತತ್ತರಿಸಿದೆ.

ಫಿಲಿಫೈನ್ಸ್ 98% ತೈಲವನ್ನು ಗಲ್ಫ್ ರಾಷ್ಟ್ರಗಳಿಂದ ಖರೀದಿಸುತ್ತಿತ್ತು. ಪ್ರಸ್ತುತ ಇಂಧನ ಸ್ಥಿರತೆ ಕಾಯ್ದುಕೊಳ್ಳುವ ಉದ್ದೇಶದಿಂದ ಈ ನಿಯಮವನ್ನು ಜಾರಿಗೆತರಲಾಗಿದೆ ಎಂದಿದ್ದಾರೆ. ಯುದ್ಧ ಆರಂಭವಾದ ನಂತರ ದೇಶದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯಲ್ಲಿ ಹಿಂದಿಗಿಂತ ದುಪ್ಪಟ್ಟು ಏರಿಕೆಯಾಗಿದೆ ಎಂದು ವರದಿಗಳು ತಿಳಿಸಿವೆ.



ಗಲ್ಫ್ ಸಂಘರ್ಷ: ಗೊಬ್ಬರದಿಂದ ವಜ್ರದವರೆಗೂ ತಟ್ಟಿದ ಬಿಸಿ!

ಗಲ್ಫ್ ಸಂಘರ್ಷದಿಂದ ತೈಲ ಹಾಗೂ ಅನಿಲ ಆಮದುವಿನಲ್ಲಿ ಉಂಟಾಗಿರುವ ಬಿಕ್ಕಟ್ಟನ್ನು ಮಾತ್ರವೇ ಗಂಭೀರವಾಗಿ ಪರಿಗಣಿಸಲಾಗಿದೆ. ಆದರೆ ಇಂಧನ ಪೂರೈಕೆಯಲ್ಲಿ ಸೃಷ್ಟಿಯಾದ ಏರುಪೇರಿನಿಂದ ಸಿಮೆಂಟ್ ಮತ್ತು ಸ್ಟೀಲಿನ ಉದ್ದಿಮೆಗಳಿಗೂ ಹೊಡೆತ ಬಿದ್ದಿದೆ. ಕೈಗಾರಿಕ ವಲಯಗಳು ಕಾರ್ಯ ನಿರ್ವಹಿಸಲು ಕಚ್ಚಾ ಸಾಮಾಗ್ರಿಗಳ ಪೂರೈಕೆ ಅವಶ್ಯ. ಬಹುತೇಕ ಎಲ್ಲಾ ಕಾರ್ಖಾನೆಗಳಿಗೂ ಕಚ್ಚಾವಸ್ತು ಸರಬರಾಜು ಆಗುತ್ತಿದ್ದದ್ದು ಗಲ್ಫ್ ರಾಷ್ಟ್ರಗಳಿಂದ. ಗಲ್ಫ್ ರಾಷ್ಟ್ರಗಳಲ್ಲಿ ತೀವ್ರಗೊಂಡ ಸಂಘರ್ಷ ಈಗ ಜಗತ್ತಿನಾದ್ಯಂತ ಕೈಗಾರಿಕೋದ್ಯಮ ಹಿಡಿತ ಕಳೆದುಕೊಳ್ಳುವ ಆತಂಕ ತಂದೊಡ್ಡಿದೆ.

ಭಾರತದ ಯಾವೆಲ್ಲಾ ಉದ್ಯಮಗಳಿಗೆ ನಷ್ಟ?

ಸಿಮೆಂಟ್ ಉತ್ಪಾದನೆಗೆ ಪೆಟ್ಟು: ಸಿಮೆಂಟ್ ಉತ್ಪಾದಿಸಲು ಅವಶ್ಯವಿರುವ ಮೂಲಧಾತು ಸುಣ್ಣದ ಕಲ್ಲು. ಭಾರತ ವಾರ್ಷಿಕ ಸುಮಾರು 483 ಮಿಲಿಯನ್ ಡಾಲರ್ ಬೆಲೆಯ ಸುಣ್ಣದ ಕಲ್ಲನ್ನು ಕಳೆದ ಆರ್ಥಿಕ ವರ್ಷದಲ್ಲಿ ಗಲ್ಫ್ ರಾಷ್ಟ್ರಗಳಿಂದ ಆಮದು ಮಾಡಿಕೊಂಡಿತ್ತು. ಇದು ಭಾರತದ ಸುಮಾರು 68% ಬೇಡಿಕೆಯ ಭಾಗವಾಗಿತ್ತು. ಭಾರತ ಕಟ್ಟಡ ನಿರ್ಮಾಣ ಕಾರ್ಯಗಳಿಗೆ, ಸರ್ಕಾರಿ ಅಭಿವೃದ್ಧಿ ಯೋಜನೆಗೆ ಅಗತ್ಯವಾದ ಸಿಮೆಂಟ್ ಉತ್ಪಾದನೆಗೆ ಇದೇ ಸುಣ್ಣದ ಕಲ್ಲುಗಳನ್ನೇ ಬಳಸಿಕೊಳ್ಳುತ್ತದೆ.

ಇನ್ನು ಕಟ್ಟಡ ನಿರ್ಮಾಣಕ್ಕೆ ಬೇಕಾದ ಜಿಪ್ಸಮ್ ಸಹ ಕೊಲ್ಲಿ ರಾಷ್ಟ್ರಗಳಿಂದಲೇ ಆಮದು ಮಾಡಿಕೊಳ್ಳಲಾಗುತ್ತಿದೆ. 62% ಪ್ರಮಾಣದ ಜಿಪ್ಸಮ್ ಪೂರೈಕೆಗೆ ದೇಶವು ಕೊಲ್ಲಿಯನ್ನು ಅವಲಂಬಿಸಿದೆ. ಸಿಮೆಂಟ್ ತಯಾರಿಕೆ ಹಾಗೂ ಕಟ್ಟಡ ನಿರ್ಮಾಣ ಕಾರ್ಯದಲ್ಲಿ ಜಿಪ್ಸಮ್ ಬಳಕೆ ಮಾಡಲಾಗುತ್ತದೆ ಕೊನೆಗಾಣದ ಸಂಘರ್ಷದ ಕಿಚ್ಚು ಈ ಉದ್ದಿಮೆಗಳನ್ನು ನೆಲ ಕಚ್ಚಿಸಿದೆ.

ಭಾರತದ ಕೃಷಿಯೂ ಕೊಲ್ಲಿಯನ್ನು ಅವಲಂಬಿಸಿದೆ: ಕಳೆದ ವರ್ಷ ದೇಶವು ಈ ರಾಷ್ಟ್ರಗಳಿಂದ 420 ಮಿಲಿಯನ್ ಡಾಲರ್ ಮೌಲ್ಯದ ಸಲ್ಫರ್ ಖರೀದಿಸಿದೆ. ಎಂದರೆ ಬೇಡಿಕೆಯ 66%. ಸಲ್ಫರ್ ಪೂರೈಕೆಯಲ್ಲಿ ವ್ಯತ್ಯಯವಾದರೆ ರಸಗೊಬ್ಬರದ ತಯಾರಿಕೆಗೆ ಸಂಕಷ್ಟ ಕಟ್ಟಿಟ್ಟ ಬುತ್ತಿ. ರಸಗೊಬ್ಬರದ ಬೆಲೆ ಏರಿಕೆಯಾಗಲು ಸಲ್ಫರ್ ಆಮದಿನಲ್ಲಿ ಉಂಟಾದ ಏರಿಳಿತವೇ ಕಾರಣವಾಗಿದೆ.

ತಜ್ಞರ ಅಭಿಪ್ರಾಯದಂತೆ ಯೂರಿಯಾ ಉತ್ಪಾದನೆಯಲ್ಲಿ ಕೂಡ ಕುಸಿತ ಕಂಡು ಬರಲಿದ್ದು, ಇದರಿಂದ ದೇಶದ ಆಹಾರ ಪೂರೈಕೆಯಲ್ಲಿ ವ್ಯತ್ಯಯ ಸಂಭವಿಸಲಿದೆ. ರಸಗೊಬ್ಬರ ವ್ಯಾಪಾರಿಗಳ ಮೇಲೆ ಮತ್ತು ಭಾರತದ ರೈತರ ಮೇಲೆ ನೇರ ಪರಿಣಾಮ ಬೀರಲಿದೆ. ಪಾಸ್ಫೇಟ್ ಗೊಬ್ಬರ ತಯಾರಿಗೆ ಸಲ್ಫರ್ ಆಸಿಡ್ ಬಳಸಲಾಗುತ್ತದೆ. ಈ ಗೊಬ್ಬರವನ್ನು ಬಹುತೇಕ ಬೆಳೆಗಳಿಗೆ ನಮ್ಮ ರೈತರು ಬಳಸುತ್ತಿದ್ದಾರೆ. ಭಾರತದ 18% ಜಿಡಿಪಿ ಕೃಷಿಯನ್ನು ಮೂಲವಾಗಿಸಿಕೊಂಡಿದೆ. ರಸಗೊಬ್ಬರದ ಕೊರತೆ ದೇಶದ ಆರ್ಥಿಕ ಸ್ಥಿತಿ ಹಾಗೂ ರೈತ ಕಾರ್ಮಿಕರ ಬದುಕಿನ ಮೇಲೆ ದುಷ್ಪರಿಣಾಮ ಬೀರಲಿದೆ.

ವಜ್ರ ಉದ್ದಿಮೆಗೂ ತಟ್ಟಲಿರುವ ಕಾವು!

ದೇಶವು 40% ಕಠಿಣ ರೂಪದ ವಜ್ರವನ್ನು ಗಲ್ಫ್ ರಾಷ್ಟ್ರಗಳಿಂದ ಆಮದು ಮಾಡಿಕೊಂಡು ಅದಕ್ಕೆ ಹೊಳಪು ಮತ್ತು ಆಕಾರ ನೀಡಿ ಪಾಲಿಶ್ ಮಾಡಿದ ವಜ್ರವನ್ನು ಹೊರಗಿನ ಮಾರುಕಟ್ಟೆಗಳಿಗೆ ರಫ್ತು ಮಾಡುತ್ತದೆ. ಆಮದಿನಲ್ಲಿ ಕೊರತೆ ಉದ್ಭವಿಸಿದರೆ ಈ ವಲಯದ ಕಾರ್ಮಿಕರ ಹಾಗೂ ಉದ್ದಿಮೆದಾರರು ಸಂಕಷ್ಟದಲ್ಲಿ ಸಿಲುಕಬಹುದು.

ಭಾರತವೂ ತನಗೆ ಅಗತ್ಯವಿರುವ ಎಲ್ಲಾ ಕಚ್ಚಾ ವಸ್ತುಗಳಿಗೂ ಒಂದೇ ಪ್ರದೇಶದ ದೇಶಗಳ ಮೇಲೆ ಅವಲಂಬಿಸದೆ. ಇಂತಹ ತುರ್ತು ಸಂದರ್ಭಗಳಲ್ಲಿ ಒಂದರ ಹಿಂದೆ ಒಂದರಂತೆ ಎಲ್ಲಾ ಉದ್ಯಮಗಳು ಸ್ಥಗಿತಗೊಂಡರೆ ಆರ್ಥಿಕ ಹಿನ್ನಡೆಗೆ ಮುನ್ನುಡಿ ಬರೆದಂತೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR